ಸಂಪುಟ : 10 ಸಂಚಿಕೆ: 105 ಪುಟ : 4+2 ಬೆಲೆ: 3.00 ಮಂಗಳವಾರ ಮೇ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 105 Pages : 4+2 Price : 3.00 Tuesday May 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಮೇ 27 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 14, 13 – ಟ್ಯಾಗೋರ್ ರಸ್ತೆ, ಹಣಗಿ ಜೀನ್, ಕುರುಡಗಿಯವರ ಲೈನ್, ಕೊಣ್ಣೂರ ಲೈನ್, ಜನತಾ ಗೋದಾಮ, ವಕೀಲರ ಚಾಳ, ಗೌಸ್ ಬಿಲ್ಡಿಂಗ್, ಹೆಡ್ ಪೋಸ್ಟ್, ಕಾರಂತ ಡಾಕ್ಟರ್ ಲೈನ್, ಪತ್ತೆಪೂರ ಲೈನ್, ಹಾದಿಮನಿಯವರ ಲೈನ್, ಮಟ್ಟಿಯವರ ಲೈನ್, ಪೊಲೀಸ್ ಕ್ವಾಟರ್ಸ್. ವಾರ್ಡ್ ನಂ. 21, 23 – ಸ್ಮಶಾನ ಗಟ್ಟಿ 4 ಭಾಗಗಳು, ಎಲಿಗಾರ ಪ್ಲಾಟ್, ಮಸೂತಿ ಲೈನ್, ಲಕ್ಷೇಶ್ವರ ಲೈನ್, ಕರಬಿಷ್ಠಿಯವರ ಲೈನ್, ತುಪ್ಪದವರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 21, 22 – ವಿಜಯನಗರ ಶಾಲೆ, ಕರುಗಲ್ ಲೇಔಟ್, ಶಿಗ್ಗಾಂವಿ ಪ್ಲಾಟ್, ಟವರ್ ಕಂಬ, ವಾಲ್ಮೀಕಿ ಭವನ, ಕಮತರ ಪ್ಲಾಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 12, 27 – ಜೆ ಟಿ ಕಾಲೇಜ್, ಮಾಲಿ ಪಾಟೀಲರ ಲೈನ್, ಮುಧೋಳರವರ ಲೈನ್, ಜಾಧವ್ ಅವರ ಲೈನ್, 3ನೇ ಕ್ರಾಸ್, ಗೋಟೂರ ಲೈನ್, ಸ್ಟೇಡಿಯಂ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಿಷೇಧಾಜ್ಞೆ ನಡುವೆಯೂ ಶ್ರೀರಾಮಸೇನೆ ಪ್ರತಿಭಟನೆ | ತೋಂಟದಾರ್ಯ ಮಠದ ಸುತ್ತ ಖಾಕಿ ಸರ್ಪಗಾವಲು

# 20ಕ್ಕೂ ಹೆಚ್ಚು ಕಾರ್ಯಕರ್ತರ ಬಂಧನ



■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದಲ್ಲಿ ಅನ್ಯ ರಾಜ್ಯದ ವ್ಯಾಪಾರಸ್ಥರನ್ನು ಕೈಬಿಟ್ಟು ಕನ್ನಡಿಗರಿಗೆ ವ್ಯಾಪಾರ ಮಾಡಲು ಅವಕಾಶ ಮಾಡಿಕೊಡುವಂತೆ ಒತ್ತಾಯಿಸಿ ಶ್ರೀರಾಮ ಸೇನೆ ಸೇರಿದಂತೆ ಕೆಲ ಸಂಘಟನೆಗಳು ಸೋಮವಾರ ಗದಗ ಬಂದ್‌ಗೆ ಕರೆ ನೀಡಿದ್ದವು. ಈ ಬಂದ್‌ಗೆ ಜಿಲ್ಲಾಡಳಿತ ನಿಷೇಧಾಜ್ಞೆ ಹೇರಿತ್ತು. ನಿಷೇಧಾಜ್ಞೆಯ ನಡುವೆಯೂ ಬೆಳ್ಳಂಬೆಳಗ್ಗೆ ಪ್ರತಿಭಟನೆಗೆ ಮುಂದಾಗಿದ್ದ ಶ್ರೀರಾಮ ಸೇನೆ ಮುಖಂಡರನ್ನು, ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದ್ದಾರೆ.

ಜಾತ್ರೆಯಲ್ಲಿ ಅನ್ಯ ರಾಜ್ಯದ, ಅನ್ಯ ಧರ್ಮದ ವ್ಯಾಪಾರಿಗಳಿಂದ ಸ್ಥಳೀಯರ ವ್ಯಾಪಾರಕ್ಕೆ ಹೊಡೆತ ಬೀಳುತ್ತಿದೆ. ಹೀಗಾಗಿ ಸ್ಥಳೀಯ ವ್ಯಾಪಾರಸ್ಥರಿಗೆ ವ್ಯಾಪಾರ ಮಾಡಲು ಅವಕಾಶ ಕೊಡುವಂತೆ ಶ್ರೀರಾಮ ಸೇನಾ ಮುಂದಾಳತ್ವದಲ್ಲಿ ಆರಂಭದಿಂದಲೂ ಹಗ್ಗ ಜಗ್ಗಾಟ ನಡೆದೇ ಇತ್ತು. ಇತ್ತ ಶ್ರೀಮಠದ ಆಡಳಿತ ಈ ಆರೋಪವನ್ನು ನಿರಾ–ಕರಿಸಿ, ಜಾತ್ರಾ ಬೀದಿಯ ಟೆಂಡರ್‌ನ್ನು ಪರಿಶೀಲಿಸಬಹುದು, ಇಲ್ಲಿ ಯಾವುದೇ ಅವ್ಯವಹಾರ ನಡೆದಿಲ್ಲ ಎಂದು ಪ್ರತಿಪಾದಿಸಿತ್ತು. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಬಂಧಗೆ ಜಿಲ್ಲಾಡಳಿತ ಅವಕಾಶ ನೀಡಿರಲಿಲ್ಲ. ಅದರಂತೆ ಬೆಳಿಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನಿಷೇಧಾಜ್ಞೆ ಜಾರಿ ಮಾಡಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದರು. ಒತ್ತಾಯ ಪೂರ್ವಕವಾಗಿ ಬಂದ್ ನಡೆಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಸ್‌ಪಿ ಬಿ.ಎಸ್. ನೇಮಗೌಡ ಎಚ್ಚರಿಕೆಯನ್ನೂ ನೀಡಿದ್ದರು. ಆದರೆ, ಜಿಲ್ಲಾಡಳಿತದ ಆದೇಶಕ್ಕೂ ಕ್ಯಾರೇ ಎನ್ನದೆ ಪ್ರತಿಭಟನೆಗೆ ಮುಂದಾಗಿದ್ದ ಶ್ರೀರಾಮಸೇನೆಯ 20ಕ್ಕೂ ಹೆಚ್ಚು ಕಾರ್ಯಕರ್ತರನ್ನು ಬೆಳ್ಳಂ ಬೆಳಗ್ಗೆ ರಸ್ತೆಗೆ ಇಳಿಯುವ ಮುನ್ನವೇ ಪೊಲೀಸರು ಬಂಧಿಸಿದರು.

#### ಹೋರಾಟ ನಿರಂತರ

ಈ ನಡುವೆ ಶ್ರೀರಾಮ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ್ ಹಾಗೂ ಕೆಲ ಕಾರ್ಯಕರ್ತರು ಜಾತ್ರೆಯ ಆವರಣದಲ್ಲಿ ದಿಢೀರ್ ಪ್ರತ್ಯಕ್ಷರಾಗಿದ್ದರು. ಶ್ರೀಮಠದ ನಡೆಯ ವಿರುದ್ಧ ಧಿಕ್ಕಾರ ಕೂಗುತ್ತ ಮಠದೊಳಕ್ಕೆ ನುಗ್ಗಲು ಯತ್ನಿಸಿದಾಗ ಪೊಲೀಸರು ಪ್ರತಿಭಟನಾಕಾರರನ್ನು ನಿಯಂತ್ರಿಸಲು ಹರಸಾಹಸ ಪಡಬೇಕಾಯಿತು. ಈ ವೇಳೆ ಮಾತನಾಡಿದ ರಾಜು ಖಾನಪ್ಪನವರ್, ಮಠದಲ್ಲಿ ಅನ್ಯ ಕೋಮಿನ, ಹೊರರಾಜ್ಯದ ವ್ಯಾಪಾರಿಗಳಿಗೆ ಅವಕಾಶ ಕೊಡಬಾರದು. ನೀವು ಮುಂದಿನ ಜಾತ್ರೆಯಲ್ಲೂ ಅವಕಾಶ ನೀಡಿದರೆ ಇದೇ ರೀತಿ ಉಗ್ರ ಹೋರಾಟ ಕೈಗೊಳ್ಳುತ್ತೇವೆ ಎಂದರಲ್ಲದೆ, ನಮ್ಮ ನ್ಯಾಯಸಮ್ಮತ ಹೋರಾಟ ಹತ್ತಿಕ್ಕಲಾಗುತ್ತಿದೆ ಎಂದು ಆರೋಪಿಸಿದರು.



#### ವ್ಯಾಪಾರಿಗಳ ನಿರಾಸಕ್ತಿ

ತೋಂಟದಾರ್ಯ ಮಠದ ಜಾತ್ರೆಯಲ್ಲಿ ಅನ್ಯಕೋಮಿನ ವ್ಯಾಪಾರಿಗಳನ್ನು ನಿರ್ಬಂಧಿಸಬೇಕೆಂದು ನೀಡಿದ್ದ ಗದಗ ಬಂದ್‌ಗೆ ವ್ಯಾಪಾರಿಗಳಿಂದ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ದಿನನಿತ್ಯದಂತೆ ವ್ಯಾಪಾರ ವಹಿವಾಟು ನಡೆದಿತ್ತು. ಅಂಗಡಿ ಮುಂಗಟ್ಟುಗಳು ಎಂದಿನಂತೆಯೇ ತೆರೆದಿದ್ದವು. ಮಠದ ಸುತ್ತ ಹಾಗೂ ಪ್ರಮುಖ ಸರ್ಕಲ್‌ಗಳಲ್ಲಿ ಸುಮಾರು 200 ಪೊಲೀಸ್ ಸಿಬ್ಬಂದಿಗಳನ್ನು ಬಂದೋಬಸ್ತ್‌ಗಾಗಿ ನಿಯೋಜಿಸಲಾಗಿತ್ತು. ಕಾರ್ಯಕರ್ತರು ಮಠದೊಳಗೆ ನುಸಳದಂತೆ ಪೊಲೀಸರು ಕಟ್ಟೆಚ್ಚರ ಕೈಗೊಂಡಿದ್ದರು.

## ವಸತಿ ನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ಈ ಕೆಳಕಾಣಿಸಿದ ಮೆಟ್ರಿಕ್ ಪೂರ್ವ ಬಾಲಕರ/ಬಾಲಕಿಯರ ವಸತಿ ನಿಲಯಗಳಿಗೆ 2025–26ನೇ ಸಾಲಿನಲ್ಲಿ ಖಾಲಿ ಇರುವ ಸ್ಥಳಗಳಿಗೆ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಂದ ವಸತಿ ನಿಲಯ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಗದಗ ಕಾರ್ಯಾಲಯಕ್ಕೆ ಸಂಪರ್ಕಿಸಲು ಸೂಚಿಸಿದೆ. ಹಾಗೂ ದೂರವಾಣಿ ಸಂಖ್ಯೆ:08372–297258 ಹಾಗೂ 9480843128

ಪ್ರವೇಶ ಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಕಡ್ಡಾಯವಾಗಿ sw.kar.nic.in ವೆಬ್‌ಸೈಟ್‌ನಲ್ಲಿ 2025–26ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯ ಆನ್‌ಲೈನ್ ಅರ್ಜಿ ಪ್ರಾರಂಭವಾದ ಮೇಲೆ ಲಿಂಕ್‌ನಡಿ State Hostel Portal State ನಲ್ಲಿ ಖಖಕ Portal ನಲ್ಲಿ ವಿದ್ಯಾರ್ಥಿಗಳ ಖಾತೆ ಸೃಜಿಸಿದ ನಂತರ ವಸತಿ ನಿಲಯಕ್ಕೆ ಅರ್ಜಿ ▸▸3ನೇ ಪುಟಕ್ಕೆ

### ಸವಿತಾ ಸಮಾಜದ ಪತ್ತಿನ ಸಹಕಾರ ಸಂಘದ ಕಾರ್ಯಾಲಯ ಉದ್ಘಾಟಿಸಿದ ಕೃಷ್ಣಗೌಡ್ರ ಪಾಟೀಲ

# ಸಮಾಜದ ಸಮಗ್ರ ಅಭಿವೃದ್ಧಿಗೆ ಬೆಂಬಲವಾಗುವೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಸವಿತಾ ಸಮಾಜ ಬಾಂಧವರ ಆರ್ಥಿಕ ಸ್ಥಿತಿ ಸುಧಾರಿಸಲು ಹಾಗೂ ಆರ್ಥಿಕವಾಗಿ ಬಲಾಢ್ಯರಾಗಲು ಹಿರಿಯರ ಆಶಯದಂತೆ ಮತ್ತು ಸವಿತಾ ಸಮಾಜ (ಹಿಂದುಳಿದ ವರ್ಗ) ಪತ್ತಿನ ಸಹಕಾರ ಸಂಘ ಸ್ಥಾಪನೆಗೊಂಡಿದ್ದು, ಅದರೊಂದಿಗೆ ಗದಗ ಜಿಲ್ಲಾ ಸವಿತಾ ಸಮಾಜದ ಕಾರ್ಯಾಲಯವೂ ಉದ್ಘಾಟನೆಗೊಂಡಿರುವುದು ಹೆಮ್ಮೆಯ ಸಂಗತಿ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಹರ್ಷ ವ್ಯಕ್ತಪಡಿಸಿದರು.

ಅವರು ವಿವೇಕಾನಂದ ರಸ್ತೆಯ ಕಮೀತ್ಕರ ಕಾಂಪ್ಲೆಕ್ಸ್‌ನಲ್ಲಿ ಗದಗ ಜಿಲ್ಲಾ ಸವಿತಾ ಸಮಾಜದಿಂದ ಸ್ಥಾಪನೆಗೊಂಡ ಸವಿತಾ ಸಮಾಜ (ಹಿಂದುಳಿದ ವರ್ಗ) ಪತ್ತೀನ ಸಹಕಾರ ಸಂಘ ಹಾಗೂ ಗದಗ ಜಿಲ್ಲಾ ಸವಿತಾ ಸಮಾಜದ ನೂತನ ಕಾರ್ಯಾಲಯವನ್ನು ಉದ್ಘಾಟಿಸಿ ಮಾತನಾಡಿದರು.



ಸವಿತಾ ಸಮಾಜವು ರಾಜಕೀಯ, ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಬೆಳೆಯಬೇಕಾಗಿದೆ. ಈ ನಿಟ್ಟಿನಲ್ಲಿ ಸರ್ವ ಸಮುದಾಯಗಳೊಂದಿಗೆ ಉತ್ತಮ ಬಾಂಧವ್ಯವನ್ನು ಹೊಂದಿರುವ ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್. ಹಡಪದ ಮಾಡುತ್ತಿರುವ ಸಮಾಜ ಪರ, ರಚನಾತ್ಮಕ ಸೇವಾ ಕಾರ್ಯಕ್ಕೆ ಸಮಸ್ತ ಸವಿತಾ ಕ್ಷೌರಿಕ ಬಾಂಧವರು ಕೈಜೋಡಿಸುವ ಮೂಲಕ ಅವರ ಶಕ್ತಿ ಹೆಚ್ಚಿಸಲು ಮಾಂದಾಗಬೇಕು ಎಂದರು. ಕರ್ನಾಟಕ ರಾಜ್ಯ ಸವಿತಾ ಸಮಾಜದ ಉತ್ತರ ಕರ್ನಾಟಕ ವಿಭಾಗೀಯ ಕಾರ್ಯದರ್ಶಿ ಹನಮಂತಪ್ಪ ರಾಂಪೂರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಂಘದ ಸಂಸ್ಥಾಪಕ ಕೃಷ್ಣಾ ಎಚ್.ಹಡಪದ ಮಾತನಾಡಿ, ಗಂಗಿಮಡಿಯಲ್ಲಿ ಗದಗ ಸವಿತಾ ಸಮಾಜ ಸುಧಾರಣಾ ಸಂಘದ ಶ್ರೀ ನಾಗದೇವರ ದೇವಸ್ಥಾನಕ್ಕೆ 10 ಲಕ್ಷ ರೂ ಹಾಗೂ ಮರಾಠ ಕ್ಷೌರಿಕ ಸಮಾಜದ ಸಮುದಾಯ ಭವನ ನಿರ್ಮಾಣಕ್ಕೆ 5 ಲಕ್ಷ ರೂ ಅನುದಾನ ಸೇರಿದಂತೆ 52 ಬಡ ಕುಟುಂಬಗಳಿಗೆ ಆಶ್ರಯ ಮನೆಗಳು ಇಗಾಗಲೇ ಮಂಜೂರಾಗಿದ್ದು, ಸವಿತಾ ಸಮಾಜದ ಕ್ಷೌರಿಕ ವೃತ್ತಿ ಕಾರ್ಮಿಕರಿಗೆ ಸಲೂನ್ ಕುರ್ಚಿಗಳು ಹಾಗೂ ಸಲಕರಣೆಗಳನ್ನು ಮತ್ತು ಇನ್ನಿತರ ಅನುದಾನಗಳನ್ನು ಒಗಿಸಲು ಆಡಳಿತಕ್ಕೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ರವಿಕುಮಾರ ರಡ್ಡಿ, ಅಬ್ದುಲಮುನಾಫ್ ಮುಲ್ಲಾ, ಪರಶುರಾಮ (ಬಜ್ಜು) ರಾಂಪೂರ, ವೆಂಕಟೇಶ ರಾಂಪೂರ, ಯಲ್ಲಪ್ಪ ರಾಯಚೂರ, ಅಶೋಕ ಮಾನೆ, ಪಾಂಡು ಕಾಳೆ, ಕಿರಣ ರಾಂಪೂರ, ಜಂಮ್ಮಣ್ಣ ಕಡಮೂರ, ಹೇಮಂತ ವಡ್ಡೆಪಲ್ಲಿ, ಮಂಜುನಾಥ ಮಾನೆ, ಅರುಣ ರಾಂಪೂರ, ರಾಜು ಮಾನೆ, ವಿಕಾಸ್ ಕ್ಷೀರಸಾಗರ, ರಮೇಶ ರಾಂಪೂರ, ಪರಶುರಾಮ ಬಳ್ಳಾರಿ,



ಆನಂದ ಮಾನೆ, ಸುರೇಶ ಬುದೂರ, ತುಕಾರಾಮ ಮಾನೆ, ಶ್ರೀನಿವಾಸ ಕೊಟೇಕಲ್ಲ, ಸುನೀಲ್ ರಾಯಚೂರ, ಕೃಷ್ಣಾ ಬುದೂರ, ಬಸವರಾಜ ಗೌಡರ್, ರಾಮು ವಡ್ಡೆಪಲ್ಲಿ, ವೆಂಕಟೇಶ ಕೊಟೇಕಲ್ಲ, ಪರಶುರಾಮ ಕೊಲ್ಲೂರ, ಪರಶುರಾಮ ಮಾರ್ಲಬೇಡ್, ಗಣೇಶ ಕಡಮೂರ, ಪ್ರಕಾಶ ಬುದೂರ, ಸಾಗರ ಹಡಪದ, ಕಾರ್ತಿಕ ಆಗಲಾವೆ, ಶ್ರೀಧರ ಕಡಬೂರ, ವಿನಾಯಕ ರಾಯಚೂರ, ರಾಜು ರಾಮ್ ಮಾನೆ ಮುಂತಾದವರಿದ್ದರು.

## ‘ಸುಗಮ ಭಾರತ ಅಭಿಯಾನ’ಕ್ಕೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷ ಚೇತನ ವ್ಯಕ್ತಿಗಳಿಗೆ ಅಡತಡೆ ರಹಿತ ವಾತಾವರಣವನ್ನು ಕಲ್ಪಿಸುವುದಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಎಸ್. ಶಿವನಗೌಡ್ರ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಆವರಣದಲ್ಲಿ ಜಿಲ್ಲಾ ಪಂಚಾಯಿತಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯೋಗದಲ್ಲಿ ಸುಗಮ ಭಾರತ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಎಲ್ಲಾ ವಿಶೇಷ ಚೇತನರಿಗೆ ಸರ್ಕಾರಿ ಹಾಗೂ ಸಾರ್ವಜನಿಕ ಕಚೇರಿಗಳಿಗೆ ಭೇಟಿ ನೀಡಲು ಮುಕ್ತ ಅವಕಾಶ ನೀಡಲಾಗಿದೆ. ಅದಕ್ಕಾಗಿ ಕಚೇರಿ, ಶಾಲಾ–ಕಾಲೇಜುಗಳಲ್ಲಿ ರ‍್ಯಾಪ್ ಅಳವಡಿಸಲು ಎಲ್ಲಾ ಇಲಾಖೆ ಅಧಿಕಾರಿಗಳಿಗೆ ತಿಳಿಸಲಾಗುವುದು. ಇದರಿಂದ ಹಿರಿಯ ನಾಗರಿಕರಿಗೆ, ವಿಕಲಚೇತನರಿಗೂ ಹಾಗೂ ಗರ್ಭಿಣಿಯರಿಗೆ ಅನುಕೂಲವಾಗುವುದೆಂದು ಎಂದು ಹೇಳಿದರು. ಜಿಲ್ಲಾ ವಿಕಲಚೇತನರ ಅಧಿಕಾರಿ ಮಹಾಂತೇಶ ಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಎಲ್ಲಾ ಸಾರ್ವಜನಿಕ ಸರ್ಕಾರಿ/ಖಾಸಗಿ ಕಟ್ಟಡಗಳಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಅಡೆತಡೆ ರಹಿತ ವಾತಾವರಣವನ್ನು ಕಲ್ಪಿಸುವ ಕುರಿತು ಮಾಹಿತಿ ತಿಳಿಸಿದರು.

ಈ ಸಂದರ್ಭದಲ್ಲಿ ಎಬಿಡಿ ಸಂಸ್ಥೆಯ ಬೆಳಗಾವಿ ವಿಭಾಗದ ಸಂಯೋಜಕಿ ಅರ್ಚನಾ ದೇವತಿ, ಜಿಲ್ಲಾ ಸಂಯೋಜಕರಾದ ಪ್ರತಿಭಾ ಮಾದರ, ಗದಗ ತಾಲೂಕಿನ ಸಂಯೋಜಕ ಖಾಜಾಹುಸೇನ ಕಾತರಕಿ, ಬಸವರಾಜ ಓಲಿ, ಶಿವಾನಂದ, ಶಶಿಕಲಾ ವಡ್ಡಟ್ಟಿ, ಭಾರತಿ ಹಾಗೂ ಗದಗ ತಾಲೂಕಿನ ಎಲ್ಲಾ ಗ್ರಾಮೀಣ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು ಉಪಸ್ಥಿತರಿದ್ದರು.

### ನರೇಗಾ ಹೊರಗುತ್ತಿಗೆ ಸಿಬ್ಬಂದಿಗಳಿಗೆ 5 ತಿಂಗಳ ಸಂಬಳ ಬಾಕಿ

# ವೇತನಕ್ಕೆ ಆಗ್ರಹಿಸಿ ಮಳೆಯಲ್ಲೇ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ನೂರಾರು ಹೊರಗುತ್ತಿಗೆ ನೌಕರರು ಮತ್ತು ಗ್ರಾಮ ಕಾಯಕ ಮಿತ್ರರರಿಗೆ ಕಳೆದ 5 ತಿಂಗಳಿಂದ ವೇತನ ಬಾಕಿ ಉಳಿದಿದ್ದು, ಕೂಡಲೇ ಬಾಕಿ ಸಂಬಳವನ್ನು ನೀಡಬೇಕೆಂದು ಆಗ್ರಹಿಸಿ ಸೋಮವಾರ ನಗರದ ಜಿಲ್ಲಾಡಳಿತ ಭವನದ ಮುಂದೆ, ಸುರಿವ ಮಳೆಯ ನಡುವೆಯೇ ಶಾಂತಿಯುತವಾಗಿ ಪ್ರತಿಭಟನೆ ನಡೆಸಿ ರ‍್ಯಾಲಿ ಮೂಲಕ ತೆರಳಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ನರೇಗಾ ನೌಕರರ ಸಂಘದ ಜಿಲ್ಲಾಧ್ಯಕ್ಷ ಸುರೇಶ ಬಾಳಿಕಾಯಿ ಮಾತನಾಡಿ, ಗ್ರಾಮೀಣಾಭಿವೃದ್ಧಿಯಲ್ಲಿ ಉದ್ಯೋಗ ಖಾತರಿ ಯೋಜನೆ ಮಹತ್ತರ ಪಾತ್ರ ವಹಿಸಿದೆ. ಕೂಲಿಕಾರರಿಗೆ ನರೇಗಾ ಕೆಲಸ ಕೊಡಿಸುವುದು, ಯೋಜನೆಯಡಿ ಹಳ್ಳಿಗಳಲ್ಲಿ ಆಸ್ತಿ




ಸೃಜನೆಗಳಲ್ಲಿ ನರೇಗಾ ನೌಕರರ ಪಾತ್ರ ಬಹುಮುಖ್ಯವಾಗಿದೆ. ಆದರೆ, ನೌಕರರಿಗೆ ಪ್ರತಿ ತಿಂಗಳು ವೇತನ ಸರಿಯಾಗಿ ಆಗದೆ ಸಮಸ್ಯೆ ಎದುರಿಸುತ್ತಿದ್ದಾರೆ. ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಜಿಲ್ಲಾ ಹಂತದಲ್ಲಿ ಎಡಿಪಿಸಿ, ಡಿಎಂಐಎಸ್, ಡಿಐಇಸಿ, ಡಿಎಎಂ ತಾಲೂಕು ಹಂತದಲ್ಲಿ ಟಿಐಇಸಿ, ಟಿಸಿ, ಟಿಎಂಐಎಸ್, ಟಿಎಇ ವಿಭಾಗದಲ್ಲಿ ಹಾಗೂ ಗ್ರಾಮ ಕಾಯಕ ಮಿತ್ರರು ಸೇರಿ ವಿವಿಧ ಹುದ್ದೆಗಳಲ್ಲಿ 130ಕ್ಕೂ ಹೆಚ್ಚು ಜನ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಎಲ್ಲ ನರೇಗಾ ಯೋಜನೆಯ ಸಿಬ್ಬಂದಿಗೆ ಕಳೆದ 5 ತಿಂಗಳಿಂದ ವೇತನ ಪಾವತಿಯಾಗಿಲ್ಲ ಎಂದು ತಿಳಿಸಿದರು. ರಾಜ್ಯ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಕುಮಾರ ಪೂಜಾರ ಮಾತನಾಡಿ, ಸರ್ಕಾರ ಕೂಡಲೇ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು. ನರೇಗಾ ಅನುಷ್ಠಾನಕ್ಕೆ ಪ್ರತಿಭಟನೆಯಲ್ಲಿ ಭಾಗವಹಿಸಿರುವ ಎಲ್ಲರೂ ಅತ್ಯವಶ್ಯವಾಗಿದ್ದಾರೆ. ಆದ್ದರಿಂದ ಸರ್ಕಾರ ವೇತನ ಪಾವತಿ ವಿಳಂಬವಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಸಂಘದ ಪರವಾಗಿ ಆಗ್ರಹಿಸಿದರು.

ಜಿ.ಪಂಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಸ್ಥಳಕ್ಕೆ ಆಗಮಿಸಿ, ಮನವಿ ಸ್ವೀಕರಿಸಿ ಮಾತನಾಡಿ, ರಾಜ್ಯಾದ್ಯಂತ ಸಮಸ್ಯೆ ಉದ್ಭವವಾಗಿದೆ. ಸರ್ಕಾರದ ಮಟ್ಟದಲ್ಲಿ ಇದನ್ನು ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ರಾಜ್ಯ ಗ್ರಾ.ಪಂ ಸದಸ್ಯರ ಸಂಘದ ಜಿಲ್ಲಾಧ್ಯಕ್ಷ ಸೋಮರಡ್ಡಿ ನಡವೂರ, ಜಿಲ್ಲಾ ಸಂಘದ ನಿಕಟಪೂರ್ವ ಅಧ್ಯಕ್ಷ ಲಿಂಗರಾಜ ಮುದಿಗೌಡ್ರ, ಸಂಘದ ಜಿಲ್ಲಾ ಉಪಾಧ್ಯಕ್ಷ ಸಿದ್ದು ಗುಡಿಮನಿ, ಜಿಲ್ಲಾ ಸಂಘದ ಕಾರ್ಯದರ್ಶಿ ಅರುಣ ಸಿಂಗ್ರಿ ಸಾಮದರ್ಭಿಕವಾಗಿ ಮಾತನಾಡಿದರು.

ಸಂಘದ ಸದಸ್ಯರಾದ ಶಾಂತಾ ತಿಮ್ಮರಡ್ಡಿ, ದಿನೇಶ ಮಲ್ಲನಗೌಡ್ರ, ಗಂಗಾಧರ ಬೇಗೂರ, ರಾಜ್ಯ ಪ್ರತಿನಿಧಿ ಕಿರಣಕುಮಾರ ಎಸ್.ಎಚ್, ಮಲ್ಲಿಕಾರ್ಜುನ ಸರ್ವಿ, ವೀರಭದ್ರಪ್ಪ ಸಜ್ಜನ, ಮಹೇಶ ಚಿತ್ತವಾಡಗಿ, ಹನುಮಂತ ಡಂಬಳ, ಪ್ರವೀಣ ಸೂಡಿ, ವೀರೇಶ ಬಸನಗೌಡ್ರ, ವಿಜಯಲಕ್ಷ್ಮೀ ಅಂಗಡಿ, ರೇಷ್ಮಾ ಕೇಳೂರ, ಮಂಜುನಾಥ ಹಳ್ಳದ, ಗ್ರಾಮ ಕಾಯಕ ಮಿತ್ರರು ಇದ್ದರು.

## ಸಂಪಾದಕೀಯ

### ಮೈಸೂರು ಸ್ಯಾಂಡಲ್ ಸೋಪ್ ರಾಯಭಾರಿ ಮತ್ತು ಕನ್ನಡದ ಅಸ್ಮಿತೆಯ ಪ್ರಶ್ನೆ

ಮೈಸೂರು ಸ್ಯಾಂಡಲ್ ಸೋಪ್, ಕೇವಲ ಒಂದು ಉತ್ಪನ್ನವಲ್ಲ, ಅದು ಕರ್ನಾಟಕದ ಹೆಮ್ಮೆ, ಪರಂಪರೆ ಮತ್ತು ಶತಮಾನಗಳ ಇತಿಹಾಸದ ಪ್ರತೀಕ. ಮೈಸೂರು ಮಹಾರಾಜರ ದೂರದೃಷ್ಟಿ ಮತ್ತು ಕನ್ನಡ ನಾಡಿನ ಶ್ರೀಗಂಧದ ಪರಿಮಳವನ್ನು ವಿಶ್ವಕ್ಕೆ ಪಸರಿಸುವ ಆಶಯದೊಂದಿಗೆ ಆರಂಭವಾದ ಈ ಸಂಸ್ಥೆ, ಇಂದಿಗೂ ತನ್ನತನವನ್ನು ಉಳಿಸಿಕೊಂಡಿದೆ.

ಆದರೆ ಇತ್ತೀಚೆಗೆ ಮೈಸೂರು ಸ್ಯಾಂಡಲ್ ಸೋಪ್ ಮತ್ತು ಅದರ ಉತ್ಪನ್ನಗಳಿಗೆ ಪರಭಾಷಾ ನಟಿ ತಮನ್ನಾ ಭಾಟಿಯಾ ಅವರನ್ನು ರಾಯಭಾರಿಯನ್ನಾಗಿ ನೇಮಿಸಿರುವ ನಿರ್ಧಾರವು ತೀವ್ರ ರಾಜಕೀಯ ಮತ್ತು ಸಾರ್ವಜನಿಕ ಅಸಮಾಧಾನಕ್ಕೆ ಕಾರಣವಾಗಿದೆ. ಸುಮಾರು 6 ಕೋಟಿ ರೂಪಾಯಿಗಳ ಬೃಹತ್ ಮೊತ್ತದ ಒಪ್ಪಂದದೊಂದಿಗೆ ನಡೆದಿರುವ ಈ ನೇಮಕಾತಿ, ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಸರ್ಕಾರದ ವಾದದಂತೆ, ಮೈಸೂರು ಸ್ಯಾಂಡಲ್ ಸೋಪ್ ಅನ್ನು ರಾಷ್ಟ್ರ ಮಟ್ಟದಲ್ಲಿ ಪ್ರಚಾರ ಮಾಡಲು, ಪ್ಯಾನ್ ಇಂಡಿಯಾ ಇಮೇಜ್ ಹೊಂದಿರುವ ನಟಿ ಬೇಕು ಎನ್ನುವುದು ಅರ್ಥವಾಗುತ್ತದೆ. ಆಧುನಿಕ ಮಾರುಕಟ್ಟೆ ತಂತ್ರಜ್ಞಾನದಲ್ಲಿ ಪ್ಯಾನ್ ಇಂಡಿಯಾ ಉಪಸ್ಥಿತಿ ಅತ್ಯಗತ್ಯ ಎಂಬುದನ್ನು ಅಲ್ಲಗಳೆಯಲಾಗುವುದಿಲ್ಲ. ಆದರೆ, ಈ ಪ್ಯಾನ್ ಇಂಡಿಯಾ ಮಾನದಂಡವನ್ನು ಅನುಸರಿಸುವಲ್ಲಿ ಸರ್ಕಾರ ಮತ್ತು ಮೈಸೂರು ಸ್ಯಾಂಡಲ್ ಸೋಪ್ ಆಡಳಿತ ಮಂಡಳಿ ಕನ್ನಡ ನಾಡಿನ ಪ್ರತಿಭೆಗಳನ್ನು ನಿರ್ಲಕ್ಷಿಸಿರುವುದು ಸ್ಪಷ್ಟವಾಗಿ ಎದ್ದು ಕಾಣುತ್ತದೆ. ಕರ್ನಾಟಕದಲ್ಲಿಯೇ ಅಪಾರ ಸಂಖ್ಯೆಯ ಅಭಿಮಾನಿಗಳನ್ನು ಹೊಂದಿರುವ, ಕನ್ನಡದಿಂದಲೇ ಪರಭಾಷೆಗಳಿಗೆ ಹೋಗಿ 'ಪ್ಯಾನ್ ಇಂಡಿಯಾ' ತಾರೆಯರಾಗಿ ಬೆಳೆದಿರುವ ಅನೇಕ ನಟಿಯರಿದ್ದಾರೆ. ದೀಪಿಕಾ ಪಡುಕೋಣೆ, ರಶ್ಮಿಕಾ ಮಂದಣ್ಣ, ಪ್ರಣೀತಾ ಸುಭಾಷ್, ಅನುಷ್ಕಾ ಶೆಟ್ಟಿ ಹೀಗೆ ಪಟ್ಟಿ ಬೆಳೆಯುತ್ತದೆ. ಇಂತಹ ಪ್ರತಿಭೆಗಳನ್ನು ಬಳಸಿಕೊಳ್ಳದೆ, ಪರಭಾಷೆ ನಟಿಗೆ ಮಣೆ ಹಾಕಿರುವುದು ಕನ್ನಡಿಗರ ಅಸ್ಮಿತೆ ಮತ್ತು ಸ್ವಾಭಿಮಾನಕ್ಕೆ ಧಕ್ಕೆ ತಂದಿದೆ. ಮೈಸೂರು ಸ್ಯಾಂಡಲ್ ಸೋಪ್ ಕರ್ನಾಟಕದ ಮನೆಮಾತು. ಅದರ ಗ್ರಾಹಕರಲ್ಲಿ ಬಹುಪಾಲು ಕನ್ನಡಿಗರೇ. ಅಂತಹ ಉತ್ಪನ್ನಕ್ಕೆ ಕನ್ನಡ ನಾಡಿನ ಕಣ್ಮಣಿಯಾದ ತಾರೆಯರನ್ನು ನೇಮಿಸಿದ್ದರೆ, ಅದು ಉತ್ಪನ್ನಕ್ಕೆ ಇನ್ನಷ್ಟು ನಿಕಟತೆಯನ್ನು ತಂದುಕೊಡುತ್ತಿತ್ತು. ಇದರಿಂದ ಉತ್ಪನ್ನದ ಬ್ರಾಂಡ್ ಮೌಲ್ಯ ಹೆಚ್ಚುತ್ತಿತ್ತು ಮಾತ್ರವಲ್ಲದೆ, ಕನ್ನಡಿಗರ ಭಾವನೆಗಳಿಗೂ ಗೌರವ ನೀಡಿದಂತಾಗುತ್ತಿತ್ತು. ಇನ್ನು ನಾಡಿನ ನೆಲ, ಜಲ, ಭಾಷೆ ವಿಚಾರವಾಗಿ ಪ್ರತಿ ಸಣ್ಣ ವಿಷಯಕ್ಕೂ ಧ್ವನಿ ಎತ್ತುವ ಕನ್ನಡಪರ ಹೋರಾಟಗಾರರು ಮೌನ ವ್ರವಹಿಸಿರುವುದು ಅವರ ಕನ್ನಡಪರ ನಿಲುವಿನ ಬದ್ಧತೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಸರಕಾರವು ಈ ನಿರ್ಧಾರವನ್ನು ಪುನರ್ ಪರಿಶೀಲಿಸಬೇಕು. ಪ್ಯಾನ್ ಇಂಡಿಯಾ ಇಮೇಜ್ ಅನ್ನು ಕನ್ನಡ ನಾಡಿನಿಂದಲೇ ಪಡೆದಿರುವ ನಟಿಯರಿಗೆ ಅವಕಾಶ ನೀಡಿ, ಕನ್ನಡದ ಅಸ್ಮಿತೆಯನ್ನು ಎತ್ತಿ ಹಿಡಿಯುವುದು ಸರ್ಕಾರದ ಕರ್ತವ್ಯ. ಸರ್ಕಾರವು ಜನಸಾಮಾನ್ಯರ ಭಾವನೆಗಳಿಗೆ ಸ್ಪಂದಿಸಿ, ಸೂಕ್ತ ನಿರ್ಧಾರ ತೆಗೆದುಕೊಳ್ಳುವುದರ ಮೂಲಕ ಈ ವಿವಾದಕ್ಕೆ ತೆರೆ ಎಳೆಯಬೇಕು.

**ರಾಜ್ಯದ 2ನೇ ಅತಿ ದೊಡ್ಡ ಆನೆ ಬಿಡಾರ ಸಕ್ರೆಬೈಲಿಗೆ ಭೇಟಿ ನೀಡಿದ ಪ್ರಯುಕ್ತ ಕಿರು ಪ್ರವಾಸ ಕಥನ**

# ಸಕ್ರೆಬೈಲಿನಲ್ಲಿ ಗಜ ಗೆಳೆಯರ ಬದುಕು




ಪ್ರವಾಸಕ್ಕೆಂದು ಅಲೆದಾಡುವ ಜನರು ತಾವು ಸಂಚರಿಸಿ ಗಳಿಸಿದ ಜ್ಞಾನವನ್ನು ಎಂದಿಗೂ ಕಳೆದುಕೊಳ್ಳುವುದಿಲ್ಲ. ಹಾಗೆಯೇ ಸ್ನೇಹಿತರೊಂದಿಗೆ ಪ್ರಯಾಣಿಸಿ, ಇತರರೊಂದಿಗೆ ಆ ಮಾಹಿತಿ ಹಂಚಿಕೊಂಡಾಗ ಜಗತ್ತು ಎಷ್ಟು ಸುಂದರವಾಗಿರುತ್ತದೆ ಎಂಬುದನ್ನು ನೆನಪಿಸುತ್ತದೆ. ದೇಶ ಸುತ್ತಿ ನೋಡು, ಕೋಶ ಓದಿ ನೋಡು. ಇದು ಹಳೆಯ ಗಾದೆ ಮಾತು. ಜೀವನದಲ್ಲಿ ಅನುಭವ ಮುಖ್ಯ. ಒಂದೊಂದು ಅನುಭವ ಒಂದೊಂದು ಪಾಠವನ್ನು ಕಲಿಸುತ್ತದೆ. ದೇಶವನ್ನು ಸುತ್ತಿ ನೋಡಿದಷ್ಟು ಜಾಸ್ತಿ ಅನುಭವವಾಗುತ್ತದೆ. ಸಂಸ್ಕೃತಿ, ಭಾಷೆ, ಅಭಿರುಚಿ ಬಗ್ಗೆ ಮತ್ತಷ್ಟು ತಿಳಿಯುತ್ತದೆ.


ಹಾಗಾಗಿ ನನಗೆ ತಿಳಿದಾಗಿನಿಂದ ಅಂದರೆ, ಪಿಯುಸಿ ಕಲಿಯುವ ವರ್ಷಗಳಿಂದ ನನಗೊಂದು ಮಹಾದಾಸೆ ಇತ್ತು. ಅದೇನೆಂದರೆ, ಶಿವಮೊಗ್ಗ ಸಮೀಪದ ಗಾಜನೂರು ಬಳಿಯ ಸಕ್ರೆಬೈಲಿನ ಆನೆ ಬಿಡಾರಕ್ಕೆ ಭೇಟಿ ನೀಡಿ ಬರಬೇಕು ಅಂತ. ಎಷ್ಟೋ ಸಾರಿ ಆ ಪ್ರದೇಶದಕ್ಕೆ ಹೋಗೋದಕ್ಕೆ ತಯಾರಿ ಮಾಡಿಕೊಂಡರೂ, ಕೊನೆಯಲ್ಲಿ ವೈಯಕ್ತಿಕ ಕಾರಣಗಳಿಂದ ಪ್ರವಾಸ ರದ್ದಾಗುತ್ತಿತ್ತು. ಕೊನೆಗೆ ನಾನು ನನ್ನ ಸ್ನೇಹಿತ ಶಿಕ್ಷಕ ವರ್ಗ, ಏನಾದರೂ ಆಗಲಿ, ಶಿವಮೊಗ್ಗ ಸಮೀಪದ ಪ್ರವಾಸಿ ತಾಣಗಳಿಗೆ ಹೋಗಲೇಬೇಕು ಎಂದುಕೊಂಡು, ಎರಡು ದಿನದ ಮಟ್ಟಿಗೆ ಶಿವಮೊಗ್ಗದಲ್ಲಿ ನಡೆಯಲಿರುವ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಭಾಗವಹಿಸಿ, ಮೊದಲನೇ ದಿನ ಉದ್ಘಾಟನೆ ಕಾರ್ಯಕ್ರಮ ವೀಕ್ಷಿಸಿ, ಮರುದಿನ ನಾವು ಭಾಗವಹಿಸಿದ ಆಟಗಳನ್ನಾಡಿ, ಸುತ್ತಮುತ್ತಲಿನ ಪ್ರವಾಸಿ ತಾಣಗಳ ನಕಾಶೆ ತಯಾರು ಮಾಡಿ, ಅದರಲ್ಲಿ ಸಕ್ರೆಬೈಲಿನ ಆನೆ ಬಿಡಾರಕ್ಕೆ ಮುಕ್ಕಾಲು ದಿನ ಮೀಸಲಿಟ್ಟು ಪ್ರವಾಸಕ್ಕೆ ಹೊರಟೆವು.

ನಾವು ಹಿಂದಿನ ದಿನ ರಾತ್ರಿ ಶಿವಮೊಗ್ಗದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ವಸತಿ ಇದ್ದು, ಎರಡು ದಿನ ನಮ್ಮ ಆಟ ಮುಗಿದ ನಂತರ ಮರುದಿನವೇ ಬೆಳಿಗ್ಗೆ ಶಿವಮೊಗ್ಗದಿಂದ 14 ಕಿ.ಮೀ ಸಮೀಪದಲ್ಲಿರುವ ಸಕ್ರೆಬೈಲು ಆನೆ ಬಿಡಾರಕ್ಕೆ ಹೊರಟೆವು.

ಈ ಬಿಡಾರ ನೋಡಲು ಶಿವಮೊಗ್ಗದಿಂದ ಸುಮಾರು 14 ಕಿ.ಮೀ ದೂರದ ಗಾಜನೂರ ಬಳಿಯ ಶಿವಮೊಗ್ಗ-ತೀರ್ಥಹಳ್ಳಿ ರಸ್ತೆಯ ಮಾರ್ಗವಾಗಿ ಬಸ್ ಮೂಲಕ ಪ್ರಯಾಣ ಪ್ರಾರಂಭಿಸಲಾಯಿತು. ಇದು ಆನೆಗಳ ಆಶ್ರಯ ತಾಣ. ಗಾಜನೂರು ಬಳಿ ಇರುವ ಇದು ರಾಜ್ಯದ ಎರಡನೇ ಅತೀ ದೊಡ್ಡ ಆನೆ ಶಿಬಿರ ಕೂಡಾ ಹೌದು. ಇಲ್ಲಿ ಸಾಕಷ್ಟು ಆನೆಗಳು ಆಶ್ರಯ ಪಡೆದಿವೆ. ತುಂಗಾ ನದಿಯ ಗಾಜನೂರ ಡ್ಯಾಮ್ ಹಿನ್ನೀರಿನಲ್ಲಿದೆ. ಸಂಕಷ್ಟದಲ್ಲಿರುವ, ಪೌಷ್ಠಿಕಾಂಶಗಳ ಕೊರತೆಯಿಂದ ಬಳಲುತ್ತಿರುವ ಆನೆಗಳಿಗೆ ಇದು ಬದುಕಿನ ನೆಲೆಯಾಗಿದೆ. ಅರಣ್ಯ ಇಲಾಖೆ ಈ ಶಿಬಿರವನ್ನು ನಿರ್ವಹಿಸುತ್ತಿದೆ. ತರಬೇತಿ ಪಡೆದ ಮಾವುತರು ಇಲ್ಲಿನ ಆನೆಗಳನ್ನು ನೋಡಿಕೊಳ್ಳುತ್ತಾರೆ. ಆನೆಗಳ ಸುಂದರ ಬದುಕನ್ನು ಹತ್ತಿರದಿಂದ ನೋಡಲು ಇಲ್ಲಿ ಒಳ್ಳೆಯ ಅವಕಾಶವನ್ನು ಕಲ್ಪಿಸಲಾಗಿದೆ.

ಸಕ್ರೆಬೈಲು ಬರೀ ಆನೆಗಳಿಗೆ ಮಾತ್ರ ನೆಚ್ಚಿನ ತಾಣವಲ್ಲ. ಪ್ರವಾಸಿಗರಿಗೂ ಬಹಳ ಇಷ್ಟವಾಗುವಂತಹ ಸ್ಥಳವಿದು.ಸದ್ಯ ಈ ಶಿಬಿರದಲ್ಲಿ ಅನೇಕ ರೀತಿಯ ಕುಮ್ಕಿ ಆನೆಗಳಿವೆ. ಆನೆಗಳ ಬಗ್ಗೆ ಅಧ್ಯಯನ ಮಾಡಬೇಕೆಂಬ ಉತ್ಸಾಹಿಗಳಿಗೂ, ಕುತೂಹಲಿಗಳಿಗೂ ಇದು ಇಷ್ಟವಾಗುವಂತಹ ತಾಣ. ಇಲ್ಲಿ ಆನೆಗಳ ನಡವಳಿಕೆ, ಅವುಗಳ ಬದುಕು, ವರ್ತನೆ, ಬುದ್ಧಿವಂತಿಕೆ ಎಲ್ಲವನ್ನೂ ಹತ್ತಿರದಿಂದ ನೋಡಬಹುದು. ಈ ದೃಶ್ಯವನ್ನು ನೋಡುವುದು ಕೂಡಾ ಒಂದು ಖುಷಿಯ ಅನುಭವ. ಬೆಳಗ್ಗಿನ ಸಮಯದಲ್ಲಿ ಆನೆಗಳಿಗೆ ಆಹಾರ ಕೊಡುವ ಕ್ಷಣವನ್ನೂ ಪ್ರವಾಸಿಗರು ಕಣ್ತುಂಬಿಕೊಳ್ಳಬಹುದು. ಶಿಬಿರದಲ್ಲಿಯೇ ಆನೆಗಳಿಗೆ ಆಹಾರ ತಯಾರಿಸಲಾಗುತ್ತದೆ. ಮಾವುತರು ಮತ್ತು ಅವರ ಸಹಾಯಕರು ಪ್ರತಿದಿನ ಆನೆಗಳಿಗೆ ಆಹಾರ ನೀಡುತ್ತಾರೆ. ಈ ಕ್ಷಣವನ್ನೂ ನೋಡುವ ಅವಕಾಶ ಪ್ರವಾಸಿಗರಿಗಿದೆ.

ಈ ಶಿಬಿರದಲ್ಲಿ ಆನೆಗಳ ತರಬೇತಿ ಹಾಗೂ ಪ್ರವಾಸಿಗಳಿಗೆ ಆನೆ ಸವಾರಿ ಮೊದಲಾದ ಚಟುವಟಿಕೆಗಳು ನಡೆಯುತ್ತವೆ. ಪ್ರತಿ ದಿನ ಬೆಳಿಗ್ಗೆ 8.30ರಿಂದ 1ರವರೆಗೆ ಪ್ರವಾಸಿಗಳಿಗೆ ಈ ಶಿಬಿರ ತೆರೆದಿರುತ್ತದೆ. ಈ ಸಮಯದ ನಂತರ ಆನೆಗಳನ್ನು ಕಾಡಿನಲ್ಲಿ ಬಿಡಲಾಗುತ್ತದೆ. ರಾತ್ರಿಯಿಡಿ ಕಾಡಿನಲ್ಲಿಯೇ ಇರುವ ಆನೆಗಳನ್ನು ಮತ್ತೆ ಮುಂಜಾನೆ ಶಿಬಿರಕ್ಕೆ ಕರೆತರಲಾಗುತ್ತದೆ ಎಂದು ಅವುಗಳ ತರಬೇತುದಾರರು ಹೇಳುತ್ತಾರೆ. ನುರಿತ ಮಾವುತರು, ಕಾವಾಡಿಗಳ ಆರೈಕೆಯಲ್ಲಿ ಇಲ್ಲಿ ದೈತ್ಯದೇಹಿ ಆನೆಗಳು ಮಾನವರ ಒಡನಾಟಕ್ಕೆ ಒಗ್ಗಿ ಶಿಸ್ತುಬದ್ಧ ಜೀವನ ನಡೆಸುತ್ತಿರುವುದನ್ನು ಕಾಣಬಹುದಾಗಿದೆ.



ಇಲ್ಲಿನ ಪರಿಸರದ ಸ್ವಚ್ಛಂದ ಜೀವನಕ್ಕೆ ಹೆಸರಾದ ಆನೆಗಳು, ಸಕ್ರೆಬೈಲಿನಲ್ಲಿ ಸ್ನೇಹಜೀವಿಗಳಾಗಿ ವಿಹರಿಸುವುದನ್ನು ನೋಡಲೆಂದೇ ನಿತ್ಯವೂ ನೂರಾರು ಪ್ರವಾಸಿಗರು ಇಲ್ಲಿಗೆ ಆಗಮಿಸುತ್ತಾರೆ. ಆನೆಗಳ ಮುಂದೆ ನಿಂತು ಫೋಟೋ ತೆಗೆಸಿಕೊಳ್ಳುತ್ತಾರೆ. ಅದರಂತೆ ನಾನು ಆತ್ಮೀಯ ಸ್ನೇಹಿತ ಶಿಕ್ಷಕರಾದ ಸತೀಶ ಬೊಮಲೆ, ಮಂಜುನಾಥ ಚಾಕಲಬ್ಬಿ, ನಿಂಗಪ್ಪ ಬಂಕಾಪೂರ ಮತ್ತು ಫಕ್ಕೀರೇಶ ಡಂಬಳ ಎಲ್ಲರೂ ಸೇರಿ ಫೋಟೋ ತೆಗೆಸಿಕೊಂಡೆವು. ಇನ್ನೆರಡು ಕಾರುಗಳಲ್ಲಿ ನಮ್ಮ ತಾಲೂಕಿನ ನೌಕರರು ಸಹ ನಮ್ಮ ಮತ್ತು ಆನೆಗಳ ಮುಂದೆ ನಿಂತು ಭಾವಚಿತ್ರ ತೆಗೆಸಿಕೊಂಡಿದ್ದು ಮರೆಯಲಾರದ ಒಂದು ಅವಿಸ್ಮರಣೀಯ ಅನುಭವ.

ಇಲ್ಲಿಗೆ ಆಗಮಿಸುವ ಪ್ರವಾಸಿಗರಿಗೆ ಶಿಬಿರದಲ್ಲಿ ಸಾಕಾನೆಗಳ ದಿನಚರಿ ನೋಡಲು ಅವಕಾಶವಿದೆ. ಸಾಕಾನೆಗಳನ್ನು ಕಟ್ಟಿ ಹಾಕುವ ಸ್ಥಳದಿಂದ ತುಂಗಾ ನದಿಗೆ (ಗಾಜನೂರಿ ಡ್ಯಾಮ್ ಹಿನ್ನೀರು) ಕರೆದೊಯ್ದು ಅಲ್ಲಿ ಸ್ನಾನ ಮಾಡಿಸಿದ ನಂತರ, ಅವುಗಳಿಗೆ ಆಹಾರವನ್ನು ಹೇಗೇಗೆ ತಯಾರಿಸಿ ಕೊಡಲಾಗುತ್ತದೆ, ಅವು ಮಾವುತ ಮತ್ತು ಕಾವಾಡಿಗಳ ಆಜ್ಞೆಯನ್ನು ಹೇಗೆ ಪಾಲಿಸುತ್ತವೆ ಎಂಬಿತ್ಯಾದಿಗಳನ್ನು ನೋಡಲು ಮತ್ತು ಅವುಗಳೊಂದಿಗೆ ಒಂದಷ್ಟು ಸಮಯವನ್ನು ಕಳೆಯಲು ಅವಕಾಶವೂ ದೊರೆಯಲಿದೆ.

ಹೀಗೆ ಅಲ್ಲಿನ ಎಲ್ಲಾ ಪ್ರದೇಶಗಳನ್ನು ನೋಡಿಕೊಂಡು ಸಾಯಂಕಾಲ ಶಿವಮೊಗ್ಗ ಮೂಲಕ ಹರಿಹರ ತಲುಪಿ, ರೈಲ್ವೆ ಮೂಲಕ ಯಲವಿಗೆ ಊರಿಗೆ ಬಂದಿಳಿದು, ಲಕ್ಷ್ಮೇಶ್ವರದ ಕಡೆಗೆ ಪ್ರಯಾಣ ಬೆಳೆಸಿದೆವು.

ಮಲೆನಾಡಿನ ಹೆಬ್ಬಾಗಿಲಾದ ಶಿವಮೊಗ್ಗದ ಆಹ್ಲಾದಕರವಾದ ತಾಣದಲ್ಲಿ ನೆಲೆಸಿರುವ ಈ ಸಕ್ರೆಬೈಲು ಆನೆ ಬಿಡಾರವು ಜನಪ್ರಿಯವಾದ ಪ್ರವಾಸಿ ಆಕರ್ಷಣೆಯಾಗಿದೆ. ಮಳೆಗಾಲದಲ್ಲಿ ಆದಷ್ಟು ಇಲ್ಲಿಗೆ ಭೇಟಿ ನೀಡುವುದು ಸೂಕ್ತವಲ್ಲ. ಬದಲಾಗಿ ಸೆಪ್ಟೆಂಬರ್‌ನಿಂದ ಮೇ ತಿಂಗಳ ನಡುವೆ ಭೇಟಿ ನೀಡಬಹುದು.

ಒಟ್ಟಾರೆಯಾಗಿ, ಪ್ರವಾಸವು ಉತ್ಸಾಹ, ಹುಮ್ಮಸ್ಸನ್ನು ಇಮ್ಮಡಿಗೊಳಿಸುವ ಮಾರ್ಗ. ಆಯಾ ಸ್ಥಳಗಳ ಸಂಸ್ಕೃತಿ-ಸಂಪ್ರದಾಯಗಳನ್ನು ಹತ್ತಿರದಿಂದ ತಿಳಿದುಕೊಳ್ಳಲು ಅನುಕೂಲ ಮಾಡಿಕೊಡುತ್ತದೆ. ಇಂತಹ ಯಾತ್ರೆಗಳು ನಮ್ಮಲ್ಲಿ ಜ್ಞಾನದ ದೀವಿಗೆಯನ್ನು ಉದ್ದೀಪನಗೊಳಿಸುವ ಶಕ್ತಿಯನ್ನು ತನ್ನಲ್ಲಿ ಹುದುಗಿಸಿಕೊಂಡಿದೆ.

**- ಬಸವರಾಜ ಎಮ್.ಯರಗುಪ್ಪಿ.**
ರಾಮಗೇರಿ, ಲಕ್ಷ್ಮೇಶ್ವರ.

**ಅತಿಥಿ ಉಪನ್ಯಾಸಕರನ್ನು ಅಸಡ್ಡೆಯಿಂದ ಕಾಣುತ್ತಿರುವ ಕೊಪ್ಪಳ ವಿವಿ**

## ಪರೀಕ್ಷಾ ಕಾರ್ಯ-ಮೌಲ್ಯಮಾಪನ ಬಹಿಷ್ಕಾರಕ್ಕೆ ನಿರ್ಧಾರ ; ಪ್ರಾಂಶುಪಾಲರ ಮೂಲಕ ಕುಲಪತಿಗಳಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕೊಪ್ಪಳ ವಿಶ್ವ ವಿದ್ಯಾಲಯ ವ್ಯಾಪ್ತಿಯ ಪದವಿ ಕಾಲೇಜುಗಳ ಪರೀಕ್ಷೆಗೆ ಸಂಬಂಧಿಸಿದಂತೆ ತಾಂತರಿಕ, ಬಾಹ್ಯ ಮೇಲ್ವಿಚಾರಕರಾಗಿ, ಪ್ರಶ್ನೆಪತ್ರಿಕೆ ಸಿದ್ಧಪಡಿಸುವಿಕೆ ಮತ್ತು ಸ್ಕ್ವಾಡ್ ಟೀಮ್ನಲ್ಲಿ ಅತಿಥಿ ಉಪನ್ಯಾಸಕರನ್ನು ಪರಿಗಣಿಸುವಂತೆ ಕಳೆದ ಶೈಕ್ಷಣಿಕ ಸಾಲಿನಲ್ಲೇ ಮನವಿ ನೀಡಿದರೂ ಕೊಪ್ಪಳ ವಿಶ್ವವಿದ್ಯಾಲಯ ಅತಿಥಿ ಉಪನ್ಯಾಸಕರ ಕುರಿತು ಅಸಡ್ಡೆ ಧೋರಣೆ ತಾಳುತ್ತಿದೆ ಎಂದು ಆರೋಪಿಸಿ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಅತಿಥಿ ಉಪನ್ಯಾಸಕರು ಆಕ್ರೋಶ ವ್ಯಕ್ತಪಡಿಸಿದರು.




ಈಚೆಗೆ ಕಾಲೇಜಿನಲ್ಲಿ ನಡೆದ ಅತಿಥಿ ಉಪನ್ಯಾಸಕರ ಸಭೆಯಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯಕರಿಗೆ ಈ ವಿಷಯ ತಿಳಿಸಿದಾಗ ನಿಮ್ಮ ಬೇಡಿಕೆಗಳನ್ನು ಸಲ್ಲಿಸಿದರೆ ವಿವಿಗೆ ಕಳಿಸುವುದಾಗಿ ಭರವಸೆ ನೀಡಿದರು. ಜೂನ್ 2ರಿಂದ ಆರಂಭಗೊಳ್ಳಲಿರುವ ಕೊಪ್ಪಳ ವಿವಿಯ ಪರೀಕ್ಷೆಗಳ ಕೊಠಡಿ ಮೇಲ್ವಿಚಾರಕರಾಗಿಯೂ ಕಾರ್ಯ ನಿರ್ವಹಿಸದೇ ಪರೀಕ್ಷೆಯ ಈ ಕಾರ್ಯದಿಂದ ದೂರ ಉಳಿದು ಮೌಲ್ಯಮಾಪನ ಕಾರ್ಯವನ್ನೂ ಬಹಿಷ್ಕರಿಸುವುದಾಗಿ ಸೋಮವಾರ ಕಾಲೇಜಿನ ಅತಿಥಿ ಉಪನ್ಯಾಸಕರು ಪ್ರಾಂಶುಪಾಲರ ಮೂಲಕ ಕೊಪ್ಪಳ ವಿವಿ ಕುಲಪತಿಗಳಿಗೆ ಮನವಿ ಸಲ್ಲಿಸಿದರು. ಕೊಪ್ಪಳದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಳೆದ ಹಲವು ವರ್ಷಗಳಿಂದಲೂ ವಿವಿಧ ವಿಷಯಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಈ ಹಿಂದೆ ವಿಶ್ವವಿದ್ಯಾಲಯಗಳ ಬಿಒಇ, ಸ್ಕ್ವಾಡ್ ಸೇರಿದಂತೆ ವಿವಿಧ ಕಾರ್ಯಗಳನ್ನು ನಿರ್ವಹಿಸಿದ್ದೇವೆ. ಈಗಲೂ ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಅತಿಥಿ ಉಪನ್ಯಾಸಕರನ್ನು ಈ ಕಾರ್ಯಗಳಿಗೆ ಬಳಸಿಕೊಳ್ಳಲಾಗುತ್ತಿದೆ. ಆದರೆ ಕೊಪ್ಪಳ ವಿಶ್ವವಿದ್ಯಾಲಯಕ್ಕೆ ಕಳೆದ 2023-24ನೇ ಸಾಲಿನಲ್ಲಿ ಈ ಕುರಿತು ಮನವಿ ಸಲ್ಲಿಸಿದಾಗ್ಯೂ ಕೊಪ್ಪಳ ವಿಶ್ವವಿದ್ಯಾಲಯ ಜಿಲ್ಲೆಯ ಅತಿಥಿ ಉಪನ್ಯಾಸಕರ ಮೇಲೆ ವಿಶ್ವಾಸವಿಲ್ಲ ಎನ್ನುವ ಧೋರಣೆ ತಾಳಿರುವುದು ನಮಗೆ ಅತ್ಯಂತ ನೋವು ತಂದಿದೆ. ಲೋಪಗಳಾದರೆ ಯಾರು ಜವಾಬ್ದಾರಿ? ಎಂದು ಪ್ರಶ್ನಿಸುವ ವಿಶ್ವವಿದ್ಯಾಲಯಕ್ಕೆ ಪಾಠ-ಪ್ರವಚನಗಳಲ್ಲಿ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಿದವರು ಯಾರು ಎಂಬುದನ್ನು ಅರಿತುಕೊಳ್ಳುವ ಸಮಯವೂ ಇಲ್ಲದಿರುವುದು ವಿಪರ್ಯಾಸ. ಆದ್ದರಿಂದ ಕೊಪ್ಪಳ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರು 2024-25ನೇ ಸಾಲಿನ ಪರೀಕ್ಷಾ ಕಾರ್ಯ ಮತ್ತು ಮೌಲ್ಯಮಾಪನ ಕಾರ್ಯವನ್ನು ಬಹಿಷ್ಕರಿಸಲು ನಿರ್ಧರಿಸಿದ್ದೇವೆ. ಅತಿಥಿ ಉಪನ್ಯಾಸಕರನ್ನು ಬಿಒಇ, ಸ್ಕ್ವಾಡ್ ಸೇರಿದಂತೆ ಪರೀಕ್ಷೆಯ ಎಲ್ಲ ಹಂತಗಳ ವಿವಿಧ ಕಾರ್ಯಗಳಲ್ಲಿ ಪರಿಗಣಿಸುವಂತೆ ಅವರು ಕೋರಿದ್ದಾರೆ. ಈ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕರಾದ ಜ್ಞಾನೇಶ್ವರ ಪತ್ತಾರ, ಗೋಣಿಬಸಪ್ಪ.ಎಚ್., ಬಸವರಾಜ ಕರುಗಲ್, ಡಾ.ಪ್ರಕಾಶ ಬಳ್ಳಾರಿ, ಎಂ.ಶಿವಣ್ಣ. ಡಾ.ತುಕಾರಾಂ ನಾಯಕ್, ಮಾರುತಿ, ಡಾ.ಶಿವಬಸಪ್ಪ ಮಸ್ಕಿ, ವಾಸುದೇವ ಬುರ್ಲಿ ಸೇರಿದಂತೆ ಅನೇಕರಿದ್ದರು.

## ಕ್ರೀಡಾಪಟುಗಳಿಗಿದೆ ವಿವಿಧ ಇಲಾಖೆಗಳಲ್ಲಿ ಮೀಸಲಾತಿ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಅರಣ್ಯ ಇಲಾಖೆ, ಅಂಚೆ ಇಲಾಖೆ, ರೈಲ್ವೆ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಕ್ರೀಡಾಪಟುಗಳಿಗೆ ಮೀಸಲಾತಿ ಇದೆ. ಕಾಲೇಜಿನ ವಿದ್ಯಾರ್ಥಿ ಕ್ರೀಡಾಪಟುಗಳು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯ್ಕ ಕರೆ ನೀಡಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಈಚೆಗೆ ನಡೆದ ಕಾಲೇಜಿನ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಕ್ರೀಡೆಗಳಿಗೆ, ಕ್ರೀಡಾಪಟುಗಳಿಗೆ ಮೊದಲಿಗಿಂತಲೂ ಹೆಚ್ಚಿನ ಪ್ರೋತ್ಸಾಹವಿದೆ. ರಾಷ್ಟ್ರಮಟ್ಟದಲ್ಲಿ ರಾಜ್ಯಮಟ್ಟದಲ್ಲಿ ಮಿಂಚುವ ಅವಕಾಶ ಇದೆ. ವಿದ್ಯಾರ್ಥಿದೆಸೆಯಿಂದಲೇ ಈ ನಿಟ್ಟಿನಲ್ಲಿ ಪ್ರಯತ್ನಿಸಬೇಕು ಎಂದರು. ಈ ಸಂದರ್ಭದಲ್ಲಿ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಉಮೇಶ ಅಂಗಡಿ, ದೈಹಿಕ ಶಿಕ್ಷಣ ನಿರ್ದೇಶಕ ಮಂಜುನಾಥ ಆರೆಂಟ್ನೂರ, ಜಯರಾಂ ಮರಳಿ ತೋಟದ, ಡಾ.ಪ್ರದೀಪ ಮತ್ತಿತರರು ಇದ್ದರು. ವಿದ್ಯಾರ್ಥಿಗಳಿಗೆ ಖೋಖೋ, ಕಬ್ಬಡ್ಡಿ, ಕ್ರಿಕೆಟ್, ಚೆಸ್ ಸೇರಿದಂತೆ ವಿವಿಧ ಕ್ರೀಡೆಗಳು ಜರುಗಿದವು.

## ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿ-ನಿವೃತ್ತರಾಗಲಿರುವ ಅತಿಥಿ ಉಪನ್ಯಾಸಕ ಶಿವಣ್ಣ ಅವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಮೌಲಾನಾ ಅಬ್ದುಲ್ ಕಲಾಂ ಆಜಾದ್ ಎಜುಕೇಷನಲ್ ಮತ್ತು ವೆಲ್ಫೇರ್ ಟ್ರಸ್ಟ್, ಕೊಪ್ಪಳ ಹಾಗೂ ಹೈದೆರಾಬಾದ್ ನ ಮನು ಕೇಂದ್ರೀಯ ವಿಶ್ವವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ನಡೆದ ಇಂದಿನ ಕಾರ್ಯಕ್ರಮದಲ್ಲಿ 10ನೇ ತರಗತಿಯಲ್ಲಿ ಉರ್ದು ವಿಷಯದಲ್ಲಿ ಅತಿ ಹೆಚ್ಚು ಅಂಕ ಪಡೆದ ಸೈಯದ್ ಫಾರ್ಹನ್ ನವಾಜ್ ವಿದ್ಯಾರ್ಥಿಯನ್ನು ಸನ್ಮಾನಿಸಲಾಯಿತು. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇದೇ ತಿಂಗಳು ಮೇ 31ನೇ ತಾರೀಕಿನಂದು ನಿವೃತ್ತಿಯಾಗುತ್ತಿರುವ ಶ್ರೀ. ಶಿವಣ್ಣ ಸರ್ ನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಎಂಎಕೆ ಎಜುಕೇಶನಲ್ ಅಂಡ್ ವೆಲ್ಫೇರ್ ಟ್ರಸ್ಟಿನ ಅಧ್ಯಕ್ಷರಾದ ಪಾಶ ರೇಷ್ಮೆ, ಮನು ವಿಶ್ವವಿದ್ಯಾಲಯದ ಅಧ್ಯಯನ ಕೇಂದ್ರದ ಕೋಆರ್ಡಿನೇಟರ್ ಡಾ.ಶಿವಬಸಪ್ಪ ಮಸ್ಕಿ , ಪರೀಕ್ಷೆಯ ಅಬ್ಸರ್ವರ್ ಲಿಯಾಕತ್, ಅಡ್ಮಿನಿಸ್ಟೇಟಿವ್ ಸ್ಟಾಫ್ ಶಫಿ ಸರ್ದಾರ್, ಹಿರಿಯ ಉಪನ್ಯಾಸಕರಾದ ಎಂ ಶಿವಣ್ಣ, ಮನು ವಿಶ್ವವಿದ್ಯಾಲಯದ ಅಧ್ಯಯನ ಕೇಂದ್ರದ ಸಂಸ್ಥಾಪಕರಾದ ಶಬ್ಬೀರ್ ಅಹ್ಮದ್ ಮತ್ತು ಗೌಸ್ ಪಾಶ, ಕರಿಯಪ್ಪ ಹಾಗೂ ಅಧ್ಯಯನ ಕೇಂದ್ರದ ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು**

# ಸಾಮಾಜಿಕವಾಗಿ ನಾಟಕಗಳ ಪಾತ್ರ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಗದಗ

ನಾಟಕವೆಂದರೆ ಭಾವನೆಗಳು, ಸಂಭಾಷಣೆ ಮತ್ತು ಕ್ರಿಯೆಗಳ ಮೂಲಕ ಮಾನವ ಅನುಭವಗಳ ಚಿತ್ರಣವನ್ನು ಒಳಗೊಂಡಿರುವ ಪ್ರದರ್ಶನ. ಸಮಾಜವನ್ನು ತಿದ್ದುವಲ್ಲಿ ನಾಟಕಗಳ ಪಾತ್ರ ಮಹತ್ವದ್ದಾಗಿದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.



ಲಿಂಗಾಯತ ಪ್ರಗತಿಶೀಲ ಸಂಘದ 2746ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಕಲಾವಿದರು ಆಯಾ ಪಾತ್ರಗಳಿಗೆ ಜೀವ ತುಂಬಿ, ಸಮಾಜಕ್ಕೆ ಸಂದೇಶ ನೀಡುವ ಕೆಲಸವನ್ನು ಮಾಡುತ್ತಾರೆ. ಕಲಾವಿದ ಪ್ರೇಕ್ಷಕರ ಹೃದಯವನ್ನು ಅಲ್ಲೋಲ ಕಲ್ಲೋಲ ಮಾಡಿದಾಗ ಉತ್ತಮ ನಟನಾಗುತ್ತಾನೆ. ಪ್ರೇಕ್ಷಕ ಒಳ್ಳೆಯದನ್ನು ಆಯ್ದುಕೊಂಡು ಕೆಟ್ಟದನ್ನು ಬಿಡಲು ಹಾಗೂ ಮನರಂಜನೆಯನ್ನು ಪಡೆಯಲು, ಸುಧಾರಣೆ ಹೊಂದಲು ನಾಟಕಗಳು ಪ್ರಯೋಜನಕಾರಿಯಾಗಿವೆ ಎಂದರು. ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಸಾಣೇಹಳ್ಳಿ ವಿರಚಿತ 'ಮೋಳಿಗೆ ಮಾರಯ್ಯ' ನಾಟಕವನ್ನು ಧಾತ್ರಿ ರಂಗ ಸಂಸ್ಥೆ ಸಿರಿಗೇರಿಯವರು ಪ್ರದರ್ಶಿಸಿದರು.

ಡಿ.ಜಿ.ಎಂ. ಆಯುರ್ವೇದ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಚಾರ್ಯ ಡಾ. ಜಿ.ಬಿ. ಪಾಟೀಲ ಉಪನ್ಯಾಸ ನೀಡಿ, ಪೌರಾಣಿಕ ಕತೆ, ಕಾದಂಬರಿ ಆಧಾರಿತ, ಭಕ್ತಿ ಪ್ರಧಾನ ನಾಟಕಗಳು, ಸಮಾಜವನ್ನು ಸುಧಾರಣೆ ಮಾಡಲು ಮೂಡಿಬಂದವು. ನಾಟಕಗಳು ಸಾವಿರಾರು ವರ್ಷಗಳ ಹಿಂದಿನ ಇತಿಹಾಸವನ್ನು ಹೊಂದಿವೆ. ನಾಟಕದಲ್ಲಿ ನಟರು ಪಾತ್ರಗಳಿಗೆ ಜೀವ ತುಂಬುತ್ತಾರೆ. ಪ್ರೇಕ್ಷಕರು ಖುಷಿಪಡುತ್ತಾರೆ. ನಾಟಕಗಳು ಹೆಚ್ಚು ಹೆಚ್ಚು ಮನಸ್ಸಿನಲ್ಲಿ ಉಳಿಯುತ್ತವೆ ಎಂದರು.

ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ನಡೆಸಿಕೊಟ್ಟರು. ಧಾರ್ಮಿಕ ಗ್ರಂಥ ಪಠಣವನ್ನು ಐಶ್ವರ್ಯ ವಿ.ಕವಿಶೆಟ್ಟಿ ಹಾಗೂ ವಚನ ಚಿಂತನವನ್ನು ಅಮೃತಾ ವಿ. ಕವಿಶೆಟ್ಟಿ ನೆರವೇರಿಸಿದರು. ದಾಸೋಹ ಸೇವೆಯನ್ನು ಈಶಣ್ಣ ಮುನವಳ್ಳಿ ಹಾಗೂ ಸಹೋದರರು ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ ಹಾಗೂ ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರ್ಮನ್ ಶಿವಾನಂದ ಹೊಂಬಳ ಹಾಗೂ ಮಠದ ಭಕ್ತರು ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರ್ಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

## ವಸತಿ ನಿಲಯಗಳ ಪ್ರವೇಶಕ್ಕೆ ನ್‌ಲೈನ್ ಅರ್ಜಿ ಆಹ್ವಾನ

▶▶ ಮೊದಲನೇ ಪುಟದಿಂದ

ಸಲ್ಲಿಸುವುದು. ಹಾಗೂ ಸಲ್ಲಿಸಿದ ಅರ್ಜಿಯನ್ನು ಪ್ರಿಂಟ್ ತೆಗೆದುಕೊಂಡು ಈ ಕೆಳಕಂಡ ದಾಖಲೆಗಳನ್ನು ಲಗತ್ತಿಸಿ ಸಂಬಂಧಿಸಿದ ಮುಖ್ಯೋಪಾಧ್ಯಯರಿಂದ ದೃಢೀಕರಿಸಿ ಈ ಕಾರ್ಯಲಯಕ್ಕೆ ಸಲ್ಲಿಸಲು ಈ ಮೂಲಕ ಪ್ರಕಟಿಸಿದೆ.

**ಅರ್ಜಿಗಳೊಂದಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಾಖಲೆಗಳು:**

ವಿದ್ಯಾರ್ಥಿಗಳ ಆಧಾರ್ ಕಾರ್ಡ್ ಝರಾಕ್ಸ್ ಪ್ರತಿ, ವಿದ್ಯಾರ್ಥಿಗಳ ಜಾತಿ ಪ್ರಮಾಣ ಪತ್ರ ಝರಾಕ್ಸ್ ಪ್ರತಿ, ಆದಾಯ ಪ್ರಮಾಣ ಪತ್ರ ಝರಾಕ್ಸ್ ಪ್ರತಿ, ವಿದ್ಯಾರ್ಥಿ/ವಿದ್ಯಾರ್ಥಿನಿಯರ ಬ್ಯಾಂಕ್ ಪಾಸ್ ಪುಸ್ತಕ ಝರಾಕ್ಸ್ ಪ್ರತಿ, ವಿದ್ಯಾರ್ಥಿಗಳ ಪಾಸ್ ಪೋರ್ಟ್ ಅಳತೆ ಭಾವಚಿತ್ರ, ವಿದ್ಯಾರ್ಥಿಗಳ ಹಿಂದಿನ ತರಗತಿಯ ಅಂಕಪಟ್ಟಿ ಪ್ರತಿ ಝರಾಕ್ಸ್ ಪ್ರತಿ, ವಿದ್ಯಾರ್ಥಿ/ವಿದ್ಯಾರ್ಥಿನಿಯರ/ಪಾಲಕರ ಮೊಬೈಲ್ ನಂಬರ್, ಪಡಿತರ ಚೀಟಿ ರೇಷನ್ ಕಾರ್ಡ್ ಝರಾಕ್ಸ್ ಪ್ರತಿ.

ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಸೀಟುಗಳ ಲಭ್ಯತೆಗೆ ಅನುಸಾರ ಪ್ರವೇಶ ಒದಗಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಗದಗ ಕಾರ್ಯಾಲಯಕ್ಕೆ ಸಂಪರ್ಕಿಸಲು ಸೂಚಿಸಿದೆ. ಹಾಗೂ ದೂರವಾಣಿ ಸಂಖ್ಯೆ:08372-297258 ಹಾಗೂ 9480843128

## ಐ.ಟಿ.ಐ ಆನ್‌ಲೈನ್ ಪ್ರವೇಶ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಮುಂಡರಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ 2025-26 ನೇ ಶೈಕ್ಷಣಿಕ ಸಾಲಿನ ಐ.ಟಿ.ಐ ಪ್ರವೇಶಕ್ಕಾಗಿ ಸಿ.ಟಿ.ಎಸ್ ಹಾಗೂ ಉದ್ಯೋಗ ಯೋಜನೆಯಡಿ ಈ ವೃತ್ತಿಗಳಿಗೆ ಆನ್ ಲೈನ್ ಮುಖಾಂತರ ಇಲಾಖಾ ವೆಬ್‌ಸೈಟ್: www.cite.karnataka.gov.in ರಲ್ಲಿ ಮೇ 28 ರವರೆಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಈ ಕಚೇರಿಯ ಕೆಲಸದ ಸಮಯದಲ್ಲಿ ಭೇಟಿ ಮಾಡಿ ಮಾಹಿತಿ ಪಡೆಯುವಂತೆ ತಿಳಿಸಲಾಗಿದೆ.

### ಯೋಗಪಾಠಶಾಲೆಯ ಸುವರ್ಣೋತ್ಸವದಲ್ಲಿ ಗ್ರಂಥ ಬಿಡುಗಡೆ ಕಾರ್ಯಕ್ರಮ

# ಯೋಗ ಗ್ರಂಥಗಳ ಅಧ್ಯಯನದಿಂದ ಆರೋಗ್ಯದರಿವು

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಂಥಗಳು ಕೂಡ ಅಕ್ಷಯ ಪಾತ್ರೆಗಳಿದ್ದಂತೆ. ಯಾವುದೇ ಗ್ರಂಥಗಳಿರಲಿ, ಅವು ನಮಗೆ ಹೆಚ್ಚಿನ ಜ್ಞಾನ ಕೊಡುತ್ತವೆ. ಯೋಗ ಗ್ರಂಥಗಳು ವಿಶೇಷವಾಗಿ ಆರೋಗ್ಯ ಜ್ಞಾನ ನೀಡುತ್ತವೆ. ಯೋಗ ಗ್ರಂಥಗಳ ಅಧ್ಯಯನದಿಂದ ನಮ್ಮಲ್ಲಿ ದೈಹಿಕ, ಮಾನಸಿಕ, ಆಧ್ಯಾತ್ಮಿಕ, ನೈತಿಕ ಆರೋಗ್ಯದ ಅರಿವು ಮೂಡುವುದು. ಆಗ ನಾವು ಆರೋಗ್ಯವಂತರಾಗಿರಲು ಪ್ರಯತ್ನಿಸುವೆವು. ಆರೋಗ್ಯವು ನಮ್ಮೆಲ್ಲ ಆಶೆ, ಆಕಾಂಕ್ಷೆ, ಇಷ್ಟಾರ್ಥಗಳನ್ನು ಪೂರೈಸಲು ಸಹಕಾರಿಯಾಗುವುದು ಎಂದು ವಿಜಯನಗರದ ಆನೆಗುಂದಿ ಸಂಸ್ಥಾನದ ರಾಜ ವಂಶಸ್ಥರಾದ ಶ್ರೀರಾಜಾಶ್ರೀಕೃಷ್ಣದೇವರಾಯರ ಅಭಿಪ್ರಾಯಪಟ್ಟರು. ಎಸ್. ವಾಂಙ್. ಬಿ. ಎಂ. ಎಸ್. ಯೋಗಪಾಠಶಾಲೆಯ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ನಡೆದ ಗ್ರಂಥ ಬಿಡುಗಡೆ ಕಾರ್ಯಕ್ರಮದಲ್ಲಿ ಡಾ. ಗಿರಿಜಾ ಎಲ್.ಎಸ್. ಇವರು ರಚಿಸಿದ "The Angel - Prof. Laxmankumar V. S' ಗ್ರಂಥವನ್ನು ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಬಿಡುಗಡೆಗೊಳಿಸಿ ಮಾತನಾಡುತ್ತಿದ್ದರು.




ಸುವರ್ಣೋತ್ಸವ ಸವಿನೆನಪಿನ 'ಯೋಗದೀಪ್ತಿ' ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಯೋಗ ಇಂದು ಎಲ್ಲರಿಗೂ ಬೇಕಾಗಿದೆ. ಗದಗ ಜಿಲ್ಲೆಯ ಯೋಗ ಕ್ಷೇತ್ರ ಶ್ರೀಮಂತವಾಗಬೇಕು, ಅದಕ್ಕಾಗಿ ಯೋಗ ಪಾಠಶಾಲೆ ಯೋಗ ಮಹಾವಿದ್ಯಾಲಯವಾಗಿ ರೂಪುಗೊಂಡು ಹೆಚ್ಚಿನ ಕಾರ್ಯ ಸಾಧನೆ ಸಾಧಿಸಬೇಕು. ಈ ಕಾರ್ಯದ ಯಶಸ್ಸಿಗೆ ಕೈಲಾದಷ್ಟು ಸಹಾಯ-ಸಹಕಾರ ನೀಡಲು ಸಿದ್ಧನಿರುವೆ ಎಂದು ಭರವಸೆ ನೀಡಿದರು.

ಪ್ರೊ. ಲಕ್ಷ್ಮಣಕುಮಾರರು ಯೋಗ ಪ್ರಸಾರ, ಪ್ರಚಾರ ಸೇವೆಯಲ್ಲಿ ಹಗಲಿರುಳು ದುಡಿದವರು. ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಯೋಗ ಅಧ್ಯಯನ ವಿಭಾಗ ಸ್ಥಾಪಿಸಿದವರು. ಕಾಕತಾಳೀಯ ಎನ್ನುವಂತೆ 50 ವರ್ಷಗಳ ಹಿಂದೆ ಯೋಗ ಪಾಠಶಾಲೆ ಉದ್ಘಾಟನಾ ಸಮಾರಂಭದಲ್ಲಿ 50 ವರ್ಷಗಳ ಹಿಂದೆ ಈ ಯೋಗ ಪಾಠಶಾಲೆ ಉದ್ಘಾಟನಾ ಸಮಾರಂಭದಲ್ಲಿ ಪ್ರದರ್ಶನಯುಕ್ತ ಯೋಗ ಉಪನ್ಯಾಸ ನೀಡಿದ ಧೀಮಂತರು. ಇಂಥವರ ಗ್ರಂಥ ಯೋಗ ಪಾಠಶಾಲೆಯ ಸುವರ್ಣೋತ್ಸವದಲ್ಲಿ ಬಿಡುಗಡೆಯಾಗಿರುವುದು ಯೋಗಾಯೋಗವಾಗಿದೆ. ಇವರ ಮಾರ್ಗದರ್ಶನದಲ್ಲಿ ಯೋಗ ಇನ್ನೂ ಹೆಚ್ಚು ಪ್ರಚಾರ-ಪ್ರಸಾಗೊಳ್ಳಲೆಂದು ಶುಭ ಹಾರೈಸಿದರು.

ಸುವರ್ಣೋತ್ಸವ ಸಮಾರಂಭ ಉದ್ಘಾಟಿಸಿದ ಮಾಜಿ ಶಾಸಕ ಡಿ.ಆರ್. ಪಾಟೀಲ, ಪ್ರೊ. ಲಕ್ಷ್ಮಣಕುಮಾರ ಸಣ್ಣೆಲ್ಲಪ್ಪನವರ, ಗ್ರಂಥ ಪರಿಚಯ ತಿಳಿಸಿದ ಎ.ಇ.ಕಾಂ ಇಂಡಿಯಾದ ನಿರ್ದೇಶಕ ಶ್ರೀಕಂಠ ಚೌಕಿಮಠ, ಕ.ವಿ.ವಿ ಯೋಗ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ. ರಮೇಶ ಎಂ.ಪಿ, ಉಪನ್ಯಾಸ ನೀಡಿದ ಮಣಿಪಾಲ (ಆಸ್ಪತ್ರೆ) ನರರೋಗ ತಜ್ಞರಾದ ಡಾ. ಸಂತೋಷ ಎನ್.ಎಸ್, ಕೆ.ಎಲ್.ಇ ತಾಂತ್ರಿಕ ವಿಶ್ವವಿದ್ಯಾಲಯದ ಆಡಳಿತ ಡೀನ್ ಪ್ರೊ. ಬಿ.ಎಲ್. ದೇಸಾಯಿ, ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಧನೇಶ ದೇಸಾಯಿ ಮುಂತಾದವರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ಸುವರ್ಣ ಮಹೋತ್ಸವ ಪದಾಧಿಕಾರಿ ಹಾಗೂ ಸದಸ್ಯರೆಲ್ಲರ ಪರವಾಗಿ ಯೋಗ ಪಾಠಶಾಲೆಯ ನಿರ್ದೇಶಕ, ಯೋಗಾಚಾರ್ಯ ಕೆ.ಎಸ್. ಪಲ್ಲೇದ ಹೃತ್ಪೂರ್ವಕ ಅಭಿನಂದನೆಗಳನ್ನು ತಿಳಿಸಿದರು.

### ಜೀರ್ಣೋದ್ಧಾರಗೊಂಡ ಬರದೂರ ಗ್ರಾಮದ ಕೆರೆ ಹಸ್ತಾಂತರ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ

# ಕೆರೆ ಪುನಶ್ಚೇತನ ಕಾರ್ಯ ಪ್ರಶಂಸನೀಯ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಧರ್ಮಸ್ಥಳ ಕ್ಷೇತ್ರದ ಅನೇಕ ಕಾರ್ಯಕ್ರಮಗಳಲ್ಲಿ ಕೆರೆ ಅಭಿವೃದ್ಧಿ ಅತ್ಯಂತ ಪ್ರಮುಖವಾದುದ್ದು. ಕೃಷಿ, ಮನುಷ್ಯರು ಹಾಗೂ ಪ್ರಾಣಿ-ಪಕ್ಷಿಗಳಿಗೆ ನೀರು ಅತಿ ಅಗತ್ಯ. ಇದಕ್ಕಾಗಿ ಜೀವಜಲ ಉಳಿಸುವೆಡೆಗೆ ಕೆರೆ ಪುನಶ್ಚೇತನ ಕಾರ್ಯವನ್ನು ಕೈಗೊಂಡಿರುವುದು ಪ್ರಶಂಸನೀಯ ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹೇಳಿದರು.

ಡಂಬಳ ಹೋಬಳಿಯ ಬರದೂರು ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಗ್ರಾಮ ಪಂಚಾಯಿತಿ ಮೇವುಂಡಿ ಮತ್ತು ಕೆರೆ ಅಭಿವೃದ್ಧಿ ಸಮಿತಿ ಇವರ ಸಂಯುಕ್ತ ಆಶ್ರಯದಲ್ಲಿ ದೇವೀಂದ್ರಪ್ಪ ಗದಗ ಅವರು ದಾನ ನೀಡಿದ ಜಮೀನಿನಲ್ಲಿ 'ನಮ್ಮ ಊರು ನಮ್ಮ ಕೆರೆ' ಕಾರ್ಯಕ್ರಮದಡಿಯಲ್ಲಿ ಜೀರ್ಣೋದ್ಧಾರಗೊಂಡ ಬರದೂರ ಗ್ರಾಮದ ಕೆರೆ ಹಸ್ತಾಂತರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಪರಿಸರವಾದಿ ಗೋಣಿಬಸಪ್ಪ ಕೊರ್ಲಹಳ್ಳಿ, ಎ.ಕೆ. ಮುಲ್ಲಾನವರ ಮಾತನಾಡಿ, ಬೆಳ್ಳಿ ಬಂಗಾರ ನೋಡಿ, ಧರಿಸಿ ಆನಂದಪಡಬಹುದು. ಆದರೆ ಪ್ರತಿಯೊಬ್ಬರಿಗೆ ಅವಶ್ಯಕವಾದದ್ದು ನೀರು, ಗಾಳಿ, ಆಹಾರ. ಈ ಮೂರರಲ್ಲಿ ಒಂದು ಇಲ್ಲದಿದ್ದರೂ ಬದುಕಲು ಸಾಧ್ಯವಿಲ್ಲ. ಸ್ವಚ್ಛವಾದ ಪ್ರಕೃತಿ ಉಳಿಸಿ ಬೆಳೆಸಬೇಕಾಗಿದೆ. ಈ ನಿಟ್ಟಿನಲ್ಲಿ ಧರ್ಮಸ್ಥಳದ ಪೂಜ್ಯರಾದ ಡಾ.ವೀರೇಂದ್ರ ಹೆಗ್ಗಡೆ ಮತ್ತು ಡಾ. ಹೇಮಾವತಿ ವಿ. ಹೆಗ್ಗಡೆಯವರು ನಾಡಿನಾದ್ಯಂತ ಶ್ರಮಿಸುತ್ತಿರುವುದು ಪ್ರಶಂಸನೀಯ ಎಂದರು.

ಮುಂಡರಗಿ ಪುರಸಭೆ ಉಪಾಧ್ಯಕ್ಷ ನಾಗೇಶ ಹುಬ್ಬಳ್ಳಿ ಮಶತನಾಡಿ, ದೇವೀಂದ್ರಪ್ಪ ಗದಗ ಅವರು ಕೆರೆಗಾಗಿ ಭೂದಾನ ನೀಡಿರುವುದು ಪ್ರಶಂಸನೀಯ. ಕೆರೆಯನ್ನು ಸಂರಕ್ಷಿಸಿದಲ್ಲಿ ಗಂಗೆಯನ್ನು ರಕ್ಷಿಸಿದಂತೆ. ಹಾಗಾಗಿ ಪುನಶ್ಚೇತನಗೊಳಿಸಿದ ಕೆರೆಯ ಶುಚಿತ್ವ ಕಾಯ್ದುಕೊಳ್ಳುವುದು ಗ್ರಾಮಸ್ಥರ ದೊಡ್ಡ ಹೊಣೆ ಎಂದು ಹೇಳಿದರು.

ಪಿಡಿಒ ಫಕ್ರುದ್ದಿನ ನದಾಫ್ ಮಾತನಾಡಿ, ಗ್ರಾಮಸ್ಥರ ಬೇಡಿಕೆಯಂತೆ ಕೆರೆಗೆ ಗ್ರಾ.ಪಂ ಮೂಲಕ ಕೆರೆಯ ಸುತ್ತ ಕಲ್ಲು ಹೊಂದಿಸುವುದು ಮತ್ತು ತಂತಿ ಬೇಲಿ ಹಾಕಲಾಗುವುದು ಎಂದು ಭರವಸೆಯನ್ನು ನೀಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಗದಗ ಜಿಲ್ಲಾ ನಿರ್ದೇಶಕ ಕೇಶವ್ ದೇವಾಂಗ ಮಾತನಾಡಿದರು. ಕಾರ್ಯಕ್ರಮದಲ್ಲಿ ಭೂದಾನಿಗಳಾದ ದೇವೀಂದ್ರಪ್ಪ ಗದಗ, ಚಂದ್ರಶೇಖರ ಜೆ, ಗ್ರಾ.ಪಂ ಅಧ್ಯಕ್ಷೆ ದುರಗಮ್ಮ ತಳಗೇರಿ, ಉಪಾಧ್ಯಕ್ಷೆ ಮಲ್ಲವ್ವ ಹಾರೋಗೇರಿ, ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ. ಪರ್ವತಗೌಡ ಹಿರೇಗೌಡ, ಸತೀಶ ಎಸ್.ಎಮ್, ವಿಶಾಲಾ ಮಲ್ಲಾಪೂರ, ಅನ್ನಪ್ಪಾ ಬಾರಕಿ, ಗ್ರಾ.ಪಂ ಸದಸ್ಯರು, ಕೆರೆ ಅಭಿವೃದ್ಧಿ ಸಮಿತಿ ಸದಸ್ಯರು, ರೈತರು, ಗ್ರಾಮಸ್ಥರು ಇದ್ದರು.

## ಅತಿಥಿ ಶಿಕ್ಷಕರನ್ನು ನೇಮಕ ಮಾಡುವಂತೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಕೆ. ಲಮಾಣಿ ನೇತೃತ್ವದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡುವಂತೆ ಗದಗ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.



ಮನವಿ ಸಲ್ಲಿಸಿ ಎಂ.ಕೆ. ಲಮಾಣಿ ಮಾತನಾಡಿ, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಆದೇಶ ಆಗುವವರೆಗೆ ಖಾಸಗಿ ಶಾಲೆಗಳಗೂ ಸರ್ಕಾರವೇ ಅತಿಥಿ ಶಿಕ್ಷಕರನ್ನು ವೇತನದೊಂದಿಗೆ ನೇಮಿಸಿಕೊಳ್ಳಲು ಅವಕಾಶ ನೀಡಿ ನೇಮಕಾತಿ ಮಂಜೂರಾತಿ ಆದ ತಕ್ಷಣದಿಂದ ಈ ಹುದ್ದೆಗಳು ರದ್ದಾಗುವಂತೆ ಆದೇಶ ನೀಡಬೇಕೆಂದು ಮನವಿ ಸಲ್ಲಿಸಿದರು.

ಸ್ವಸ್ಥ ಸಮಾಜ ನಿರ್ಮಾಣಕ್ಕೆ ಶಿಕ್ಷಣ ಇಲಾಖೆಯೇ ಭದ್ರ ಬುನಾದಿ. ಮಕ್ಕಳ ಶಿಕ್ಷಣವನ್ನು ಸಮಗ್ರವಾಗಿ ಪೂರೈಸಲು ಶಿಕ್ಷಕರ ಅನಿವಾರ್ಯತೆ ಹಾಗೂ ಅವಶ್ಯಕತೆ ಇಲಾಖೆಗೆ ಇದೆ. ಖಾಲಿ ಇರುವ ಹುದ್ದೆಗಳಿಗೆ ತಕ್ಷಣವೇ ಅತಿಥಿ ಶಿಕ್ಷಕರನ್ನು ನೇಮಿಸುವ ಪ್ರಕ್ರಿಯೆಯನ್ನು ಸರ್ಕಾರ ಪ್ರಥಮ ಅದ್ಯತೆ ನೀಡಿ ಮಾಡಬೇಕಾಗಿದೆ. ಶಿಕ್ಷಣ ಇಲಾಖೆಯಲ್ಲಿ ಅತಿಥಿ ಶಿಕ್ಷಕರ ನೇಮಕಾತಿಗೆ ಆದಷ್ಟು ಬೇಗ ಪರವಾನಿಗೆ ನೀಡುವುದರೊಂದಿಗೆ ಮಕ್ಕಳ ಶಿಕ್ಷಣದ ಉಜ್ವಲ ಭವಿಷ್ಯಕ್ಕೆ ಕಾರಣೀಭೂತರಾಗಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ ಗದಗ ಜಿಲ್ಲಾ ಘಟಕದ ಸರ್ವ ಪದಾಧಿಕಾರಿಗಳು, ಸದಸ್ಯರು, ಉಪಸ್ಥಿತರಿದ್ದರು.




ಭಾರತದ ನೆಚ್ಚಿನ ಪ್ರಧಾನಮಂತ್ರಿ ನರೇಂದ್ರ ಮೋದಿಯವರ 'ಮನ್ ಕೀ ಬಾತ್' ಕಾರ್ಯಕ್ರಮವನ್ನು ಗದಗ ನಗರದ ವಾರ್ಡ್ ನಂ 04, 07ರ ಬೂತ್ ಅಧ್ಯಕ್ಷರುಗಳ ಮನೆಯಲ್ಲಿ ವಿಕ್ಷಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಹಿರಿಯರಾದ ಶ್ರೀಪತಿ ಉಡುಪಿ, ಮನ್ ಕೀ ಬಾತ್ ಸಂಚಾಲಕ ರಾಚಯ್ಯ ಹೊಸಮಠ, ಪ್ರಧಾನ ಕಾರ್ಯದರ್ಶಿ ದೇವಪ್ಪ ಗೊಟೂರ, ನಗರಸಭಾ ಸದಸ್ಯ ರಾಘವೇಂದ್ರ ಯಳವತ್ತಿ, ಅನಿಲ ಅಬ್ಬಿಗೇರಿ, ಶ್ರೀನಿವಾಸ ಹುಬ್ಬಳ್ಳಿ, ದೇವೇಂದ್ರಪ್ಪ ಹೂಗಾರ, ಮಂಜುನಾಥ ತಳವಾರ, ಶಿವು ಗೊಟೂರ, ಕೃಷ್ಣಾ ಚಿಂತಾ, ಮಾರುತಿ ಅಮ್ರದ, ಮಂಜುನಾಥ ಮಾದಗುಂಡಿ, ಲಕ್ಷ್ಮಣ ವಾಲ್ಮೀಕಿ, ಅಶೋಕ ಹೊನ್ನಳ್ಳಿ ಮುಂತಾದವರಿದ್ದರು.

## ದಾಖಲೆರಹಿತ ವಲಸಿಗರೆಂದು ನೂರಾರು ನಿವಾಸಿಗಳ ವಶಕ್ಕೆ ಪಡೆದ ಅಸ್ಸಾಂ ಪೊಲೀಸರು

■ ವಿಜಯಸಾಕ್ಷಿ ಸುದ್ದಿ, ಅಸ್ಸಾಂ

ಬಾಂಗ್ಲಾದೇಶದಿಂದ ಬಂದ ದಾಖಲೆರಹಿತ ವಲಸಿಗರು ಎಂಬ ಅನುಮಾನದ ಮೇಲೆ ಅಸ್ಸಾಂ ಪೊಲೀಸರು ಭಾನುವಾರ ರಾಜ್ಯದ ಹಲವಾರು ನಿವಾಸಿಗಳನ್ನು ವಶಕ್ಕೆ ಪಡೆದಿದ್ದಾರೆ ಎಂದು ವರದಿಯಾಗಿದೆ. ಅವರಲ್ಲಿ ಹಲವರನ್ನು ದಾಖಲೆಗಳನ್ನು ಪರಿಶೀಲಿಸಿದ ನಂತರ 15 ಗಂಟೆಗಳಿಗೂ ಹೆಚ್ಚು ಸಮಯದ ನಂತರ ಬಿಡುಗಡೆ ಮಾಡಲಾಯಿತು ಎಂದು ಅದು ಹೇಳಿದೆ. ದಾಖಲೆರಹಿತ ವಲಸಿಗರೆಂದು

ಕಾರ್ಯಾಚರಣೆ ಶನಿವಾರ ರಾತ್ರಿ ಪ್ರಾರಂಭವಾಯಿತು ಮತ್ತು ಭಾನುವಾರ ಬೆಳಿಗ್ಗೆ ತನಕ ಮುಂದುವರೆಯಿತು. ಹತಿಗಾಂವ್, ಸಿಜುಬಾರಿ, ಘೋರಾಮಾರ ಮತ್ತು ಸೋನಾಪುರ ಸೇರಿದಂತೆ ಗುವಾಹಟಿಯ ಮುಸ್ಲಿಂ ಬಾಹುಳ್ಯ ಪ್ರದೇಶಗಳಲ್ಲಿ ಈ ಕಾರ್ಯಾಚರಣೆ ನಡೆದಿದೆ ಎಂದು ವರದಿ ಹೇಳಿದೆ.

## ಋಣಗೇಡಿ ರಾಜ್ಯ ಸರ್ಕಾರ: ಗೋವಿಂದಗೌಡ್ರ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಯೋಜನೆಯಲ್ಲಿ ದೇಶಾದ್ಯಂತ 10 ಸಾವಿರ ವಿದ್ಯುತ್ ಚಾಲಿತ ಬಸ್ಸುಗಳನ್ನು ನೀಡುವ ಯೋಜನೆಯಲ್ಲಿ ಬೆಂಗಳೂರಿಗೆ ಮಾತ್ರ 4,500 ಬಸ್ಸುಗಳನ್ನು ನೀಡಲು ಮುಂದಾಗಿರುವ ಕೇಂದ್ರ ಸರ್ಕಾರದ ಭಾರೀ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ರಾಜ್ಯದ ಪರ ಕಾಳಜಿಗೆ ರಾಜ್ಯಾದ್ಯಂತ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಆದರೆ, ರಾಜ್ಯದ ಪರ ಕಾರ್ಯಕ್ಕೆ ಒಂದು ಸಣ್ಣ ಕೃತಜ್ಞತೆಯನ್ನೂ ಸಲ್ಲಿಸದ ರಾಜ್ಯ ಕಾಂಗ್ರೆಸ್ ಋಣಗೆಡಿ ಸರಕಾರವಾಗಿದೆ ಎಂದು ಜೆಡಿಎಸ್ ಪಕ್ಷದ ರಾಜ್ಯದ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ರಾಜ್ಯ ಸರ್ಕಾರವನ್ನು ಟೀಕಿಸಿದ್ದಾರೆ.



ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಪಕ್ಕದ ರಾಜ್ಯ ಆಂಧ್ರಪ್ರದೇಶಕ್ಕೆ 2 ಸಾವಿರ ವಿದ್ಯುತ್ ಚಾಲಿತ ಬಸ್ಸುಗಳನ್ನು ನೀಡಿದ್ದು, ಅಲ್ಲಿನ ಮುಖ್ಯಮಂತ್ರಿ ರೇವಂತ ರೆಡ್ಡಿ ದೆಹಲಿಗೆ ತೆರಳಿ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಕೃತಜ್ಞತೆ ಸಲ್ಲಿಸಿ ಸನ್ಮಾನಿಸಿ ಬಂದಿರುವುದನ್ನು ಇಡೀ ದೇಶವೇ ನೋಡಿದೆ.

ಎಲ್ಲದಕ್ಕೂ ಕೇಂದ್ರ ಸರ್ಕಾರವನ್ನು ಟೀಕಿಸುವುದನ್ನು ರೂಢಿ ಮಾಡಿಕೊಂಡಿರುವ ಈ ರಾಜ್ಯದ ಮುಖ್ಯಮಂತ್ರಿಗಳು ಈ ಕೆಲಸಕ್ಕೆ ಮೆಚ್ಚುಗೆ ವ್ಯಕ್ತಪಡಿಸಬೇಕಾಗಿತ್ತು. ಅಭಿವೃದ್ಧಿ ಕಾರ್ಯಗಳಲ್ಲಿ ರಾಜಕೀಯ ಬಿಟ್ಟು ಕೆಲಸ ಮಾಡಬೇಕು ಹಾಗೂ ಕೆಲಸ ಮಾಡಿದವರನ್ನು ಮೆಚ್ಚಿಕೊಳ್ಳಬೇಕು. ಇದುವೇ ನಿಜವಾದ ರಾಜಕೀಯವೆಂದು ವೆಂಕನಗೌಡ ಆರ್. ಗೋವಿಂದಗೌಡ್ರ ರಾಜ್ಯ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

### 2025-26ನೇ ಸಾಲಿಗೆ ಸರಕಾರಿ ಮೆಟ್ರಿಕ್ ನಂತರದ ಬಾಲಕರ/ಬಾಲಕಿಯರ ವಸತಿ ನಿಲಯಗಳಿಗೆ ಪ್ರವೇಶ

# ಖಾಲಿ ಇರುವ ಸ್ಥಾನಗಳಿಗೆ ಅರ್ಜಿಗಳ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಗದಗ ತಾಲೂಕಿನ ಸರಕಾರಿ ಮೆಟ್ರಿಕ್ ನಂತರದ ಬಾಲಕರ/ಬಾಲಕಿಯರ ವಸತಿ ನಿಲಯಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ ಪ್ರವೇಶ ಕೋರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪಿ.ಯು.ಸಿಯಿಂದ ಡಿಗ್ರಿ ಓದುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿದ್ಯಾರ್ಥಿ ನಿಲಯಕ್ಕೆ ಸೇರಬಯಸುವ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ w.kar.nic.in ವೆಬ್‌ಸೈಟ್‌ನಲ್ಲಿ 2025-26ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಎಂಬ ಲಿಂಕ್‌ನಡಿ State Hostel Portal ನಲ್ಲಿ SSP Portal ನಲ್ಲಿ ಅರ್ಜಿ ಸಲ್ಲಿಸಲು ಕೋರಲಾಗಿತ್ತು. ಒಂದುವೇಳೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ಅನಾನುಕೂಲವಾಗುವ ವಿದ್ಯಾರ್ಥಿಗಳಿಗೆ ಕಛೇರಿಯಲ್ಲಿ ಅರ್ಜಿ ಫಾರ್ಮ್ ಕೊಡಲಾಗುವುದು. ನಂತರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆನ್‌ಲೈನ್ ಪ್ರಿಂಟ್ ಕಾಪಿಯನ್ನು ಪ್ರವೇಶ ಪಡೆದ ಕಾಲೇಜುಗಳ ಪ್ರಾಚಾರ್ಯರಿಂದ ದೃಢೀಕರಿಸಿ ಅವಶ್ಯಕ ಈ ಕೆಳಕಂಡ ಮುದ್ರಿತ ದಾಖಲಾತಿಗಳನ್ನು ಲಗತ್ತಿಸಿ ಅರ್ಜಿಯೊಂದಿಗೆ ಸಲ್ಲಿಸಲು ಕೋರಲಾಗಿದೆ. 2025-26ನೇ ಸಾಲಿನಲ್ಲಿ ಖಾಲಿ ಇರುವ ಸ್ಥಾನಗಳಲ್ಲಿ ಪ.ಜಾತಿ. ಪ.ಪಂಗಡದ ವಿದ್ಯಾರ್ಥಿಗಳಿಗೆ ಶೇ. 75, ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶೇ. 25 ಪ್ರವೇಶ ನೀಡಲಾಗುವದು.

**ಸಲ್ಲಿಸಬೇಕಾದ ಅವಶ್ಯಕ ದಾಖಲಾತಿಗಳು:** ಆನ್‌ಲೈನ್ ಅರ್ಜಿಯ ಪ್ರತಿ, ಜಾತಿ ಮತ್ತು ಆದಾಯ ಝರಾಕ್ಸ ಪ್ರತಿ, ಆಧಾರ್ ಕಾರ್ಡ್ ಝರಾಕ್ಸ ಪ್ರತಿ, ತಂದೆ-ತಾಯಿ ಆಧಾರ್ ಕಾರ್ಡ್ ಝರಾಕ್ಸ ಪ್ರತಿ, ಕಳೆದ ಸಾಲಿನ ಅಂಕಪಟ್ಟಿ ಝರಾಕ್ಸ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಝರಾಕ್ಸ ಪ್ರತಿ.

**ಸರ್ಕಾರಿ ಮೆಟ್ರಿಕ್ ನಂತರದ ವಸತಿ ನಿಲಯದ ಹೆಸರು ಮತ್ತು ವಿಳಾಸ:** ಸರಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಕೇಶವ ನಗರ-ಗದಗ, ಸರಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ-ಬೆಟಗೇರಿ, ವೆಲ್‌ಫೇರ್ ಟೌನ್‌ಶಿಪ್ ಸಬ್ ಜೈಲ್ ರೋಡ್-ಬೆಟಗೇರಿ, ಸರಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ ಹಾತಲಗೇರಿ ನಾಕಾ-ಗದಗ (ಪಿ.ಯು.ಸಿ), ಸರಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ-ಗದಗ (ಶಿವಾನಂದ ಮಠ ನಂದೀಶ್ವರ ನಗರ), ಸರಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ ಹನುಮಾನ್‌ನಗರ ಸಿ.ಡಿ.ಓ ಜೈನ್ ಸ್ಕೂಲ ಹತ್ತಿರ-ಗದಗ, ಸರಕಾರಿ ಮೆಟ್ರಿಕ್ ನಂತರದ ವೃತ್ತಿಪರ ಬಾಲಕರ ವಸತಿ ನಿಲಯ, ಕಳಸಾಪೂರ ರೋಡ್, ಸೇವಾಲಾಲನಗರ-ಗದಗ, ಸರಕಾರಿ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಸತಿ ನಿಲಯ ಕಳಸಾಪೂರ ರೋಡ್, ಇಂಡಿಯನ್ ಬ್ಯಾಂಕ್ ಹತ್ತಿರ-ಗದಗ, ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ-ಲಕ್ಕುಂಡಿ, ಸರಕಾರಿ ಮೆಟ್ರಿಕ್ ನಂತರದ ಪರಿಶಿಷ್ಟ ಪಂಗಡದ ಬಾಲಕರ ವಸತಿ ನಿಲಯ ಕಳಸಾಪೂರ ರಸ್ತೆ-ಗದಗ.

**ಷರತ್ತುಗಳು:** ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಾವಕಾಶ ನೀಡಲಾಗುವುದು. ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಕ್ಕೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಾವಕಾಶ ನೀಡಲಾಗುವುದು. ಅರ್ಜಿ ಜೊತೆಗೆ ಜಾತಿ, ಆದಾಯ, ಆಧಾರ ಕಾರ್ಡ ಹಾಗೂ ಕಳೆದ ಸಾಲಿನ ಅಂಕಪಟ್ಟಿ ಝರಾಕ್ಸ್ ಪ್ರತಿಯನ್ನು ಮತ್ತು ಬ್ಯಾಂಕ್ ಪಾಸ್‌ಬುಕ್ ಝರಾಕ್ಸ್ ಪ್ರತಿಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ಧೃಢೀಕರಿಸಿ ಲಗತ್ತಿಸುವುದು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಉಚಿತ ಊಟ, ಉಪಹಾರ, ವಸತಿ ಸೌಲಭ್ಯ, ಆಟದ ಸಾಮಗ್ರಿ ಹಾಗೂ ಸಂಕೀರ್ಣ ವಸ್ತುಗಳನ್ನು ನೀಡಲಾಗುವುದು.

ವಿದ್ಯಾರ್ಥಿ ನಿಲಯಕ್ಕೆ ಆಯ್ಕೆ ಆದ ವಿದ್ಯಾರ್ಥಿಗಳ ಹೆಸರನ್ನು ಕಛೇರಿಯ ನೋಟಿಸ್ ಬೋರ್ಡಿನಲ್ಲಿ ಹಾಕಲಾಗುವುದು. ಹೆಚ್ಚಿನ ಮಾಹಿತಿಗಾಗಿ-ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಎಸ್.ಪಿ ಆಫಿಸ್ ಎದುರಿಗೆ, ಹೊಸ ಬಸ್ ನಿಲ್ದಾಣದ ಹಿಂಬಾಗ-ಗದಗ ಇಲ್ಲಿ ಸಂಪರ್ಕಿಸುವುದು ಅಥವಾ ಸಂಬಂಧಪಟ್ಟ ವಸತಿ ನಿಲಯದ ವಾರ್ಡನ್‌ಗಳನ್ನು ಸಂಪರ್ಕಿಸುವದು. ಕಛೇರಿ ದೂರವಾಣಿ ಸಂಖ್ಯೆ-08372-297258.

## ಕಪ್ಪತ್ತಗುಡ್ಡದ ವಿಶೇಷತೆ ಶಾಲಾ ಪಠ್ಯವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಸ್ಯ ಕಾಶಿ, ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದು ಕರೆಯಲ್ಪಡುವ, ಅಪಾರ ಸಸ್ಯ ರಾಶಿಯನ್ನು ಹೊಂದಿರುವ ಕಪ್ಪತ್ತಗುಡ್ಡದ ಮಹತ್ವ ಹಾಗೂ ವಿಶೇಷತೆಗಳನ್ನು ಸಾರುವ ವಿಷಯವನ್ನು ಶಾಲಾ ಪಠ್ಯಕ್ರಮದಲ್ಲಿ ಅಳವಡಿಸಬೇಕೆಂದು ಜನಪದ ಕಲಾವಿದ ಶ್ರೀ ಗವಿಶಿದ್ಧಯ್ಯ ಹಳ್ಳಿಕೇರಿಮಠ ಸರಕಾರಕ್ಕೆ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸ್ಕಂದ ಪುರಾಣದಲ್ಲಿ ಎಪ್ಪತ್ತುಗಿರಿಗಿಂತ ಕಪ್ಪತ್ತಗಿರಿ ಮೇಲು ಎಂದು ಸಾರಲಾಗಿದೆ. ಶುದ್ಧ ಗಾಳಿ ಬೀಸುವ ಪ್ರದೇಶ, ಪಂಚಲೋಹಗಳ ಬೀಡಾಗಿರುವ ಕಪ್ಪತ್ತಗುಡ್ಡ ವನ್ಯ ಜೀವಿಧಾಮವಾಗಿದೆ. ಸರಕಾರ ಸರಂಕ್ಷಿತ ಪ್ರದೇಶವೆಂದು ಘೋಷಣೆ ಮಾಡಿದೆ.

ನಮ್ಮ ನಾಡಿನ ಅನೇಕ ಮಹತ್ವವಾದ ವಿಷಯಗಳನ್ನು ಪಠ್ಯಕ್ರಮದಲ್ಲಿ ಸೇರಿಸಲಾಗಿದೆ. ಆದರೆ ನಮ್ಮ ಭಾಗದ ಐತಿಹಾಸಿಕ ಪರಿಸರದ ಇತಿಹಾಸವನ್ನು ಹೊಂದಿರುವ ಕಪ್ಪತ್ತಗುಡ್ಡದ ವಿಷಯಕ್ಕೆ ನಿರ್ಲಕ್ಷ್ಯ ಸರಿಯಲ್ಲ. ಕಪ್ಪತ್ತಗುಡ್ಡ ಮಹತ್ವ, ವಿಶೇಷತೆಗಳನ್ನು ಸಾರುವ ವಿಷಯವನ್ನು ಶಾಲಾ ಪಠ್ಯಕ್ರಮದಲ್ಲಿ ಅಳವಡಿಸಬೇಕು, ಆ ಮೂಲಕ ಪರಿಸರದ ಮಹತ್ವವನ್ನು ಸಾರಬೇಕಿದೆ ಎಂದು ಅವರು ಒತ್ತಾಯಿಸಿದ್ದಾರೆ.



## ನಿಧನ

**ನೂರಜಹಾನ್ ಎಸ್.ನದಾಫ್**



**ಗದಗ:** ನಗರದ ವೆಲ್‌ಫೇರ್ ಟೌನ್ ನಿವಾಸಿ, ಬಿಎಸ್‌ಎನ್‌ಎಲ್ ನಿವೃತ್ತ ನೌಕರರಾದ ಹಾಜಿ ಎಸ್.ಎನ್. ನದಾಫ್ ಅವರ ಧರ್ಮಪತ್ನಿ ಶ್ರೀಮತಿ ನೂರಜಹಾನ್ ಎಸ್.ನದಾಫ್ ಭಾನುವಾರ ಪೈಗಂಬರವಾಸಿಯಾದರು. ಮೃತರು ಪತಿ, ಇಬ್ಬರು ಪುತ್ರರು, ಪುತ್ರಿ, ಮೊಮ್ಮಕ್ಕಳು ಮತ್ತು ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಹದಗೆಟ್ಟ ರೈತ ಸಂಪರ್ಕ ರಸ್ತೆಗಳಿಗಿಲ್ಲ ಅನುದಾನ । ತಾತ್ಕಾಲಿಕ ಪರಿಹಾರಕ್ಕೂ ಕಾನೂನು ತೊಡಕು, ಸ್ಥಳೀಯರ ವಿರೋಧ

# ರಸ್ತೆ ಅಭಿವೃದ್ಧಿಯೂ ಇಲ್ಲ, ಮಣ್ಣೂ ಇಲ್ಲ!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹದಗೆಟ್ಟ ರೈತ ಸಂಪರ್ಕ ರಸ್ತೆಗಳಿಗೆ ಒಂದಷ್ಟು ಮಣ್ಣು ಹಾಕಲೂ ಅನುದಾನವಿಲ್ಲದ ಅಸಹಾಯಕತೆಯ ನಡುವೆಯೂ ರೈತರ, ಸಾರ್ವಜನಿಕರ ಸಹಕಾರದೊಂದಿಗೆ ರಸ್ತೆಗೆ ಮಣ್ಣು ಹಾಕಿ ತಾತ್ಕಾಲಿಕ ಪರಿಹಾರಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಮುಂದಾಗುತ್ತಿದ್ದಾರೆ. ಆದರೆ ಇದಕ್ಕೂ ಕಾನೂನು ತೊಡಕು ಎದುರಾಗಿದ್ದು, ಮಣ್ಣು ಹಾಕಲು ಗ್ರಾಮಸ್ಥರ ವಿರೋಧದಿಂದ ಅಸಹಾಯಕತೆ ವ್ಯಕ್ತಪಡಿಸುತ್ತಿದ್ದಾರೆ.

ಲಕ್ಷ್ಮೇಶ್ವರ ವ್ಯಾಪ್ತಿಯ ಜಂಗಳಕೇರಿ ರೈತ ಸಂಪರ್ಕ ರಸ್ತೆ ಸಾಕಷ್ಟು ಹದಗೆಟ್ಟಿದೆ. ಈ ಭಾಗದ ನೂರಾರು ರೈತರು ಸಂಕಷ್ಟದಲ್ಲಿದ್ದು, ರಸ್ತೆ ದುರಸ್ಥಿ ಮಾಡಿಸಿಕೊಡುವಂತೆ ಮನವಿ ಮಾಡಿದ್ದರು. ಮನವಿಯನ್ವಯ ಶಾಸಕರು ನಾನು ಜೆಸಿಬಿ ಖರ್ಚು ಕೊಡುತ್ತೇನೆ, ಒಡೆಯರ ಮಲ್ಲಾಪುರದ ಕೂಸಿನ ಗುಡ್ಡದಿಂದ ನೀವೇ ಟ್ರ್ಯಾಕ್ಟರ್ ಮೂಲಕ ಮಣ್ಣನ್ನು ರಸ್ತೆಗೆ ಹಾಕುವ ಕೆಲಸ ಮಾಡಿಕೊಳ್ಳಿ ಎಂದು ರೈತರಿಗೆ ಹೇಳಿದ್ದಾರೆ.



ಅದರಂತೆ ರೈತರು ಶಾಸಕರು ಕೊಟ್ಟ ಜೆಸಿಬಿ ಬಳಸಿ, ಪ್ರತಿಯೊಬ್ಬರೂ 500 ರೂನಂತೆ ಹಣ ಕೂಡಿಸಿ ಟ್ರ್ಯಾಕ್ಟರ್‌ಗಳ ಮೂಲಕ ಮಲ್ಲಾಪುರ ವ್ಯಾಪ್ತಿಯ ಕೂಸಿನ ಗುಡ್ಡದಲ್ಲಿನ ಮಣ್ಣು ಹೇರಲು ಮುಂದಾದಾಗ ಒಡೆಯರ ಮಲ್ಲಾಪುರದ ರೈತರು ಮಣ್ಣು ಹೇರುವುದಕ್ಕೆ ಅಡ್ಡಿಪಡಿಸಿದ್ದಾರೆ. ಈ ವೇಳೆ ಒಡೆಯರ ಮಲ್ಲಾಪುರ ಗ್ರಾಮದ ಮುಖಂಡರಾದ ಪರಮೇಶಪ್ಪ ಮೆಳ್ಳಿಗಟ್ಟಿ, ಆರ್.ಸಿ. ಪಾಟೀಲ, ದ್ಯಾಮಣ್ಣ ತಳವಾರ, ಲಕ್ಷ್ಮವ್ವ ಮೆಳ್ಳಿಗಟ್ಟಿ, ಪದ್ಮರಾಜ ಪಾಟೀಲ, ನಿಂಗಪ್ಪ ಪಶುಪತಿಹಾಳ ಸೇರಿ ಗ್ರಾಮಸ್ಥರು ಈ ಗುಡ್ಡದಲ್ಲಿ ಕೂಸಮ್ಮದೇವಿ ಮೂರ್ತಿ ಇದ್ದು, ಧಾರ್ಮಿಕ ಭಾವನೆ ಹೊಂದಿದ್ದೇವೆ. ಗೋಮಾಳದ ರಕ್ಷಣೆಗಾಗಿ ಇಲ್ಲಿ ಗಿಡಮರ ಬೆಳೆಸಿ ಕಾಯುತ್ತೇವೆ. ಇದು ಗೋಮಾಳದ ಜಮೀನು. ಮಣ್ಣು ಹೇರಬೇಡಿ ಎಂದು ಅಡ್ಡಿಪಡಿಸಿದ್ದಾರೆ. ಈ ವೇಳೆ ಮಣ್ಣು ಹೇರಲು ಬಂದ ರೈತರು, ನಾವೂ ರೈತರೇ ಆಗಿದ್ದು, ಹೊಲಕ್ಕೆ ಹೋಗಲು ದಾರಿ ಇಲ್ಲದಂತಾಗಿದೆ. ಮಣ್ಣು ಹೇರಲು ಬಿಡಿ ಎಂದು ಹೇಳಿದಾಗ ಪರಿಸ್ಥಿತಿ ಬದಲಾಗಿತ್ತು.

ಈ ವೇಳೆ ಸ್ಥಳಕ್ಕಾಗಮಿಸಿ ಕಂದಾಯ ನಿರೀಕ್ಷಕ ಎಂ.ಎ ನಧಾಫ್, ಗ್ರಾಮ ಆಡಳಿತಾಧಿಕಾರಿ ಬಿ.ಎಂ. ಮಲ್ಲಿಗವಾಡ ಮತ್ತು ಪೊಲೀಸರು ರೈತರನ್ನು ಸಮಾಧಾನಪಡಿಸಿ ಮಣ್ಣು ಹೇರುವುದನ್ನು ಬಂದ್ ಮಾಡಿಸಿದ್ದಾರೆ. ಕೆಲ ದಿನಗಳ ಹಿಂದೆ ಅಣ್ಣಿಗೇರಿ-ಯತ್ನಳ್ಳಿ ರೈತ ಸಂಪರ್ಕ ರಸ್ತೆಗೆ ಗೊಜನೂರ ಗುಡ್ಡದಿಂದ ಮಣ್ಣು ಹೇರಲು ಹೋದ ರೈತರನ್ನೂ ಗ್ರಾಮಸ್ಥರು ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ವಾಪಸ್ ಕಳುಹಿಸಿದ್ದಾರೆ. ಈ ನಡುವೆಯೂ ರೈತರು ದೊಡ್ಡೂರ ರಸ್ತೆಯಲ್ಲಿನ ಕೆರೆಯಲ್ಲಿ ಮಣ್ಣು ಹೇರಿ ರಸ್ತೆಗೆ ಮಣ್ಣು ಹಾಕಿ ತಾತ್ಕಾಲಿಕ ಪರಿಹಾರ ಕಂಡುಕೊಂಡಿದ್ದಾರೆ.

ಒಟ್ಟಿನಲ್ಲಿ ತಾಲೂಕಿನಲ್ಲಿ ಹದಗೆಟ್ಟ ಮುಖ್ಯ ರಸ್ತೆಗಳ ಜತೆಗೆ ರೈತ ಸಂಪರ್ಕ ರಸ್ತೆಗಳ ಅಭಿವೃದ್ಧಿಗೆ ಅತ್ತ ಅನುದಾನವೂ ಇಲ್ಲ, ಸ್ವಂತ ಹಣದಿಂದ ರಸ್ತೆಗೆ ತಾತ್ಕಾಲಿಕ ಪರಿಹಾರ ಮಾಡಿಕೊಳ್ಳಲು ಹಿಡಿ ಮಣ್ಣೂ ಸಿಗುತ್ತಿಲ್ಲ ಎಂಬಂತಾಗಿದೆ.

> ತಾಲೂಕಿನಲ್ಲಿ ಮುಖ್ಯ ರಸ್ತೆಗಳ ಜತೆಗೆ ರೈತ ಸಂಪರ್ಕ ರಸ್ತೆಗಳೂ ಹದಗೆಟ್ಟಿವೆ. ಹಿಂದುಳಿದ ಕ್ಷೇತ್ರದ ಅಭಿವೃದ್ಧಿಗೆ ಅನುದಾನ ಕಲ್ಪಿಸುವಂತೆ ಮುಖ್ಯಮಂತ್ರಿಗಳು ಸೇರಿ ಸಂಬಂಧಪಟ್ಟ ಸಚಿವರು, ಉನ್ನತಮಟ್ಟದ ಅಧಿಕಾರಿಗಳಿಗೂ ಮನವಿ ಸಲ್ಲಿಸಿದ್ದೇನೆ. ಸದನದಲ್ಲೂ ರಸ್ತೆಗಳ ಅಭಿವೃದ್ಧಿಗೆ ಪ್ರಶ್ನೆ ಮಾಡಿದ್ದೇನೆ. ಆದಾಗ್ಯೂ ಅನುದಾನವಿಲ್ಲದ್ದರಿಂದ ತಾತ್ಕಾಲಿಕ ಪರಿಹಾರ ಕಲ್ಪಿಸುವ ಉದ್ದೇಶದಿಂದ ನಾವೇ ಸ್ವಂತ ಹಣದಲ್ಲಿ ಜೆಸಿಬಿ ವ್ಯವಸ್ಥೆ ಮಾಡಲು ಮುಂದಾದರೆ ಕಾನೂನು ತೊಡಕು, ಜನರ ವಿರೋಧ ವ್ಯಕ್ತವಾಗುತ್ತಿದೆ. ಈ ಪರಿಸ್ಥಿತಿಯಲ್ಲಿ ಅಧಿಕಾರಿಗಳ, ಜನರ ಸಹಕಾರ ಅಗತ್ಯವಾಗಿದೆ.
>
> **– ಡಾ. ಚಂದ್ರು ಲಮಾಣಿ.**
> ಶಾಸಕರು.

> ಗೋಮಾಳ, ಗುಡ್ಡ, ಅರಣ್ಯ ಪ್ರದೇಶದಲ್ಲಿ ಮಣ್ಣು ಎತ್ತುವಳಿ ಮಾಡುವುದು ಕಾನೂನು ಪ್ರಕಾರ ಅಪರಾಧವಾಗಿದೆ. ಸರ್ಕಾರಿ ಜಮೀನಿನಲ್ಲಿ ಅನಧೀಕೃತವಾಗಿ ಮಣ್ಣು ಎತ್ತುವಳಿ ಮಾಡುವುದನ್ನು ತಡೆಯಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇವೆ. ಅಭಿವೃದ್ಧಿ ಕಾರ್ಯಗಳಿಗೆ ಮಣ್ಣಿನ ಕೊರತೆಯ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿದ್ದೇವೆ.
>
> **– ವಾಸುದೇವ ಸ್ವಾಮಿ.**
> ತಹಸೀಲ್ದಾರರು, ಲಕ್ಷ್ಮೇಶ್ವರ.



ನಿಡಗುಂದಿಕೊಪ್ಪದ ಶಾಖಾ ಮಠದಿಂದ ಶಿವಾನುಭವ ಸಂಪದ

# ಜಗತ್ತಿನಲ್ಲಿ ಗುರುವಿನ ಸ್ಥಾನ ದೊಡ್ಡದು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗುರುವು ಇಲ್ಲದೆ ಯಾವ ವ್ಯಕ್ತಿಯ ವ್ಯಕ್ತಿತ್ವವೂ ವಿಕಸನವಾಗುವುದಿಲ್ಲ. ಮನೆಯಲ್ಲಿ ತಾಯಿ ಮೊದಲ ಗುರುವಾದರೆ, ನಮ್ಮ ಭವಿಷ್ಯದ ಜೀವನಕ್ಕೆ ಗುರುಗಳು ಅವಶ್ಯಕವಾಗಿ ಬೇಕೇ ಬೇಕು. ಆದ್ದರಿಂದ ಈ ಜಗತ್ತಿನಲ್ಲಿ ಗುರುವಿಗಿಂತ ದೊಡ್ಡವರು ಯಾರೂ ಇಲ್ಲ ಎಂದು ಗದಗ ಕನಕದಾಸ ಶಿಕ್ಷಣ ಸಮಿತಿಯ ಪ್ರಧಾನ ಕಾರ್ಯದರ್ಶಿ ರವಿ ದಂಡಿನ ಹೇಳಿದರು.

ಸಮೀಪದ ನಿಡಗುಂದಿ ಗ್ರಾಮದ ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ನಿಡಗುಂದಿಕೊಪ್ಪದ ಶಾಖಾ ಮಠದಿಂದ ಜರುಗಿದ ಶಿವಾನುಭವ ಸಂಪದವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ನಮ್ಮ ಭಾರತೀಯ ಪರಂಪರೆಯಲ್ಲಿ ಗುರು-ಶಿಷ್ಯ ಪರಂಪರೆಗೆ ಅಪಾರವಾದ ಮಹತ್ವವಿದೆ. ರಾಮಕೃಷ್ಣ ಪರಮಹಂಸರು-ಸ್ವಾಮಿ ವಿವೇಕಾನಂದ, ಗುರು ಗೋವಿಂದಭಟ್ಟರು-ಸಂತ ಶಿಶುನಾಳ ಷರೀಫ್ ಈ ಮುಂತಾದ ಗುರು ಪರಂಪರೆ ನಮ್ಮ ಕಣ್ಣು ಮುಂದೆ ಆದರ್ಶವಾಗಿ ನಿಲ್ಲುತ್ತದೆ. ಗುರುಪೌರ್ಣಿಮೆಯ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮವನ್ನು ಏರ್ಪಡಿಸಿದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳವರಿಗೆ ನಾನು ಭಕ್ತಿಯಿಂದ ತಲೆ ಬಾಗುತ್ತೇನೆ. ಇಂತಹ ಸ್ವಾಮೀಜಿಗಳು ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದುವಲ್ಲಿ ಮಹತ್ವದ ಪಾತ್ರ ವಹಿಸುತ್ತಾರೆ. ಗುರುವನ್ನು ಮತ್ತು ತಂದೆ-ತಾಯಿಯನ್ನು ಗೌರವಿಸದ ಯಾವುದೇ ವ್ಯಕ್ತಿ ಸಮಾಜದಲ್ಲಿ ಇರಲು ಅನರ್ಹನೆನಿಸಿಕೊಳ್ಳುತ್ತಾನೆ. ಆದ್ದರಿಂದ ನಾವೆಲ್ಲರೂ ಅವರಿಗೆ ಋಣಿಯಾಗಿರೋಣ ಎಂದರು.

ಸಾನ್ನಿಧ್ಯ ವಹಿಸಿದ್ದ ಅಭಿನವ ಚನ್ನಬಸವ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶಿವಾನುಭವ ಸಂಪದ ಶಿವನ ಅನುಭೂತಿಯನ್ನು ನೀಡುತ್ತದೆ. ಇಲ್ಲಿ ವ್ಯಕ್ತವಾಗುವ ವಿಚಾರಗಳನ್ನು ನೀವು ಜೀವನದಲ್ಲಿ ಅಳವಡಿಸಿಕೊಳ್ಳಲು ಪ್ರಯತ್ನಿಸಿದರೆ ನಿಮ್ಮ ಜೀವನ ಪಾವನವಾಗುತ್ತದೆ ಎಂದರು.


ನಿಡಗುಂದಿಯ ಅಕ್ಕಮಹಾದೇವಿ ಮಹಿಳಾ ವೇದಿಕೆಯವರು ಕುಮಾರೇಶ್ವರ ನಾಮಾವಳಿ ಹೇಳಿದರು. ಧರ್ಮರ ಮಠದ ಷಣ್ಮುಖಪ್ಪಜ್ಜನವರು ವೇದಿಕೆಯ ಮೇಲಿದ್ದರು. ಬಸವರಾಜ ಜಂಗಣ್ಣವರ ಮತ್ತು ಶರಣಪ್ಪ ಅರಮನಿ ಸಂಗೀತ ಸೇವೆ ನೀಡಿದರು. ಎ.ಎಸ್. ಗೆದಗೇರಿ ಸ್ವಾಗತಿಸಿದರು. ಶಿಕ್ಷಕ ಡಿ.ಎಸ್. ಬಡಿಗೇರ ನಿರೂಪಿಸಿದರು.

> ಗುಡದೂರುಕಲ್ಲಮಠದ ಸಿದ್ದಲಿಂಗಯ್ಯ ಶಾಸ್ತ್ರಿಗಳು ವಿಶೇಷ ಉಪನ್ಯಾಸ ನೀಡಿ, ಗುರುವಿನ ಗುಲಾಮನಾಗುವ ತನಕ ದೊರೆ-ಯದಣ್ಣ ಮುಕುತಿ ಎಂದು ದಾಸರು ಹಾಡಿದ್ದಾರೆ. ನಮ್ಮ ಸಮಾಜಕ್ಕೆ ಗುರು ಕುಮಾರೇಶ್ವರರಂಥವರು, ಅನ್ನದಾನ ಶ್ರೀಗಳಂಥವರು, ಚನ್ನಬಸವ ಶ್ರೀಗಳಂಥವರು, ಈಗಿನ ಅಭಿನವ ಚನ್ನಬಸವ ಶ್ರೀಗಳಂಥವರು ಅವಶ್ಯವಾಗಿ ಬೇಕಾಗಿದ್ದು, ಅವರ ನೆರಳಿನಲ್ಲಿ, ಅವರ ಮಾರ್ಗದರ್ಶನದಲ್ಲಿ ನಾವು ಮುನ್ನಡೆದರೆ ನಮ್ಮ ಜೀವನ ಪಾವನವಾಗುತ್ತದೆ ಎಂದರು.

# ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಮೇ 27 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.



ಬೆಳಿಗ್ಗೆ 9.15 ಗಂಟೆಗೆ ಗದಗ ಬೆಟಗೇರಿ ನಗರಸಭೆ ಆವರಣದಲ್ಲಿ ಜರಗುವ 15ನೇ ಹಣಕಾಸು ಯೋಜನೆಯ ಅಡಿಯಲ್ಲಿ ಖರೀದಿಸಿದ 4-ಟ್ಯಾಕ್ಟರ್ ಟ್ರೇಲರ್, 6-ಮಿನಿ ಟಿಪ್ಪರ್ ಗಳನ್ನು ಸಾರ್ವಜನಿಕ ಉಪಯೋಗಕ್ಕೆ ಲೋಕಾರ್ಪಣೆ ಹಾಗೂ ನಗರಸಭೆಯಿಂದ "ಬಿ" ಖಾತಾ ಉತಾರಗಳ ವಿತರಣಾ ಸಮಾರಂಭದಲ್ಲಿ ಭಾಗವಹಿಸುವರು.

ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕೋವಿಡ್ ಕುರಿತು ಪೂರ್ವ ತಯಾರಿ ಕೈಗೊಳ್ಳಲು ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಬೆಳಿಗ್ಗೆ 11 ಗಂಟೆಗೆ ಕೆ ಎಚ್ ಪಾಟೀಲ ಸಭಾಭವನದಲ್ಲಿ ಜರುಗುವ ಪೂಜ್ಯ ಶ್ರೀ ಶಿವಪ್ರಿಯಾನಂದ ಸ್ವಾಮಿಗಳವರು (ಪುನಿತ ಮಹಾರಾಜ) ಸನ್ಯಾಸ ಸ್ವೀಕರಿಸಿದ ನಂತರ "ಪುರಪ್ರವೇಶ" ಮಾಡುತ್ತಿರುವ ಪರ್ವ ಪ್ರಸಂಗದಲ್ಲಿ ಅವರನ್ನು ಗೌರವಿಸಿ ಸ್ವಾಗತಿಸುವ ಸಮಾರಂಭ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಸಂಜೆ 5 ಗಂಟೆಗೆ ಆಯುಕ್ತರು, ನಗರಸಭೆ ಅವರೊಂದಿಗೆ ಸಭೆ ಕೈಗೊಳ್ಳುವರು.

ರಾತ್ರಿ 9 ಗಂಟೆಗೆ ಗದಗ – ರಸ್ತೆ ಮೂಲಕ ಹುಬ್ಬಳ್ಳಿಗೆ ಪ್ರಯಾಣ ಬೆಳಿಸಿ ಹುಬ್ಬಳ್ಳಿ – ರೈಲಿನ (ರಾಣಿ ಚೆನ್ನಮ್ಮ) ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಹಿರಿಯ ನಾಗರಿಕರ ಸಂಘದ ಮಾಸಿಕ ಸಭೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ತಾಲೂಕು ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘದ ಮಾಸಿಕ ಸಭೆಯು ಸಂಘದ ಸದಸ್ಯೆ ಪಾರವ್ವ ಧರಣಿ ಅವರ ನಿವಾಸದಲ್ಲಿ ಜರುಗಿತು.



ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಹಿರಿಯ ನಾಗರಿಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಅನೇಕ ಉಪಯುಕ್ತ ಯೋಜನೆಗಳನ್ನು ಜಾರಿಗೆ ತಂದಿದೆ. ಹಿರಿಯರು ಅವುಗಳ ಬಗ್ಗೆ ತಿಳಿದುಕೊಂಡು ಉಪಯೋಗ ಪಡೆದುಕೊಳ್ಳಬೇಕು. ಈಗಾಗಲೇ ಸಂಘದಲ್ಲಿ 800ಕ್ಕೂ ಹೆಚ್ಚು ಸದಸ್ಯರು ಹೆಸರು ನೋಂದಾಯಿಸಿಕೊಂಡಿದ್ದು, ಅವರಿಗೆ ಸರ್ಕಾರದ ಯೋಜನೆಗಳ ಕುರಿತು ಮಾಹಿತಿ ನೀಡಲಾಗಿದೆ. ಸರ್ಕಾರದಿಂದ ಸಿಗುವ ಎಲ್ಲ ಸವಲತ್ತುಗಳನ್ನು ಒದಗಿಸಲು ಸಂಘ ಪ್ರಾಮಾಣಿಕ ಪ್ರಯತ್ನ ಮಾಡುತ್ತದೆ. ಸಂಘದ ಕಾರ್ಯಚಟುವಟಿಕೆಗಳನ್ನು ನಡೆಸಲು ಸ್ಥಳದ ಅಗತ್ಯ ಇದೆ. ಈ ಕುರಿತು ಪುರಸಭೆಗೆ ಮನವಿ ಮಾಡಿದ್ದು, ಇನ್ನು ಸ್ವಲ್ಪ ದಿನಗಳಲ್ಲೇ ಸ್ಥಳದ ಅವಕಾಶ ಮಾಡಿಕೊಡುವುದಾಗಿ ಪುರಸಭೆ ಮುಖ್ಯಾಧಿಕಾರಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಚೆನ್ನಪ್ಪ ಕೋಲ್ಕಾರ, ಎನ್.ಎ. ಹೇಮಾದ್ರಿಮಠ, ಎಂ.ಎಚ್. ಖುದ್ದುಬಾಯಿ, ಸಿ.ಎಸ್. ಕೋಟಿಮಠ ಸೇರಿದಂತೆ ಮತ್ತಿತರರು ಇದ್ದರು.

# ಶಿವಪ್ರಿಯಾನಂದ ಸ್ವಾಮೀಜಿ ಪುರಪ್ರವೇಶ ಸಮಾರಂಭ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಶ್ರೀ ರಾಮಕೃಷ್ಣ ವಿವೇಕಾನಂದಾಶ್ರಮದ ಶಿವಪ್ರಿಯಾನಂದ ಸ್ವಾಮೀಜಿ (ಪುನೀತ ಮಹಾರಾಜ) ಸನ್ಯಾಸ ಸ್ವೀಕರಿಸಿದ ನಂತರ ಪುರಪ್ರವೇಶ ಸಮಾರಂಭ ಮೇ 27ರಂದು ಬೆಳಿಗ್ಗೆ 11ಕ್ಕೆ ಜರುಗಲಿದೆ.



ಸಮಾರಂಭದಲ್ಲಿ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ, ಶಿವಾನಂದ ಬೃಹನ್ಮಠದ ಅಭಿನವ ಶಿವಾನಂದ ಸ್ವಾಮೀಜಿ, ಗದಗ-ವಿಜಯಪುರ ಶ್ರೀ ರಾಮಕೃಷ್ಣ ವಿವೇಕಾನಂದಾಶ್ರಮದ ಅಧ್ಯಕ್ಷ ನಿರ್ಭಯಾನಂದ ಸರಸ್ವತಿ ಸ್ವಾಮೀಜಿ ಸಾನ್ನಿಧ್ಯ ವಹಿಸುವರು.

ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಉದ್ಘಾಟಿಸುವರು. ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸುವರು.

ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ಜಿಪಂ ಮಾಜಿ ಅಧ್ಯಕ್ಷರಾದ ಸುಜಾತಾ ದೊಡ್ಡಮನಿ, ಪ್ರಭಣ್ಣ ಹುಣಸಿಕಟ್ಟಿ, ವಾಸಣ್ಣ ಕುರಡಗಿ, ಸಿದ್ಧಲಿಂಗೇಶ್ವರ ಪಾಟೀಲ, ಜಿಪಂ ಮಾಜಿ ಸದಸ್ಯರಾದ ಹನಮಂತ ಪೂಜಾರ, ಶಕುಂತಲಾ ಮೂಲಿಮನಿ, ಗದಗ-ಬೆಟಗೇರಿ ನಗರಸಭೆ ಚುನಾಯಿತ ಅಧ್ಯಕ್ಷ ಕೃಷ್ಣ ಪರಾಪೂರ, ಉಪಾಧ್ಯಕ್ಷೆ ಶಕುಂತಲಾ ಅಕ್ಕಿ ಸೇರಿ ಜಿಲ್ಲೆಯ ಪ್ರಮುಖರು ಪಾಲ್ಗೊಳ್ಳುವರು ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ಪರಿಸರದ ಸಹಕಾರಿ ಬಳಗ ಹಾಗೂ ಶಿವಪ್ರಿಯಾನಂದ ಸ್ವಾಮೀಜಿ ಅವರ ಅಭಿಮಾನಿ ಬಳಗದ ಪ್ರಕಟಣೆ ತಿಳಿಸಿದೆ.

# ಎಲ್ಲೆಂದರಲ್ಲಿ, ಏನೇನೂ ಮಾತನಾಡದಿರಿ; ಮೋದಿ ಸಲಹೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಾರ್ವಜನಿಕ ಹೇಳಿಕೆಗಳಲ್ಲಿ ಸಂಯಮ ಕಾಯ್ದುಕೊಳ್ಳುವಂತೆ ಎನ್‌ಡಿಎ ನಾಯಕರಿಗೆ ಪ್ರಧಾನಿ ನರೇಂದ್ರ ಮೋದಿ ದೆಹಲಿಯಲ್ಲಿ ಭಾನುವಾರ ನಡೆದ ಎನ್‌ಡಿಎ ನಾಯಕರ ಸಭೆಯಲ್ಲಿ ಸಲಹೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಉತ್ತಮ ಆಡಳಿತದ ಮೇಲೆ ಕೇಂದ್ರೀಕರಿಸಿ ನಡೆದ ಸಭೆಯಲ್ಲಿ ಎನ್‌ಡಿಎ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು ಭಾಗವಹಿಸಿದ್ದರು. "ಎಲ್ಲೆಂದರಲ್ಲಿ

ಪಕ್ಷದ ನಾಯಕರು ಮಾಡಿದ ಅನಗತ್ಯ ಹೇಳಿಕೆಗಳ ಬಗ್ಗೆ ಪ್ರಧಾನಿ ಕಳವಳ ವ್ಯಕ್ತಪಡಿಸಿದ ಪ್ರಧಾನಿ ಮೋದಿ ವಿವೇಚನಾರಹಿತ ಹೇಳಿಕೆಗಳನ್ನು ನೀಡದಂತೆ ಒತ್ತಾಯಿಸಿದ್ದಾರೆ ಎಂದು ಮೂಲಗಳು ಬಹಿರಂಗಪಡಿಸಿವೆ ಎಂದು ಇಂಡಿಯಾ ಟುಡೆ ವರದಿ ಮಾಡಿದೆ.



ಗದಗ ಜಿಲ್ಲೆ ಬಸಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ರತ್ನಾ ಗಿರೋಸಾ ಬದಿ ಅವರಿಗೆ ಎಂ.ವಿ.ಎಲ್.ಎ 'ಭಾರತ ಜ್ಯೋತಿ-ಪ್ರತಿಭಾ ಸಮ್ಮಾನ ಅಚಿವರ್ಸ್ ಅವಾರ್ಡ್-2025' ಪ್ರಶಸ್ತಿಯನ್ನು ಹೈದರಾಬಾದ್‌ನಲ್ಲಿ ನೀಡಿ ಗೌರವಿಸಲಾಯಿತು. ಅವರು ಶಿಕ್ಷಕ ವೃತ್ತಿಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು, ಕಲಿಯುವ ಮಕ್ಕಳಲ್ಲಿ ಆಸಕ್ತಿ ಮೂಡಿಸಿ, ಹೊಸ ಹೊಸ ಪ್ರಯೋಗಗಳ ಮೂಲಕ ಮಕ್ಕಳ ಮೆಚ್ಚಿನ ಶಿಕ್ಷಕಿಯಾಗಿದ್ದಾರೆ.

ಅಸ್ತಮಾ ರೋಗಿಗಳಿಗೆ ಉಚಿತ ಔಷಧಿ ವಿತರಣೆ ಜೂನ್ 8ಕ್ಕೆ

# 59ನೇ ವರ್ಷದ ಉಚಿತ ಅಸ್ತಮಾ ಯಜ್ಞ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕಳೆದ 58 ವರ್ಷಗಳಿಂದ ಅಸ್ತಮಾ ರೋಗಿಗಳಿಗೆ ಉಚಿತವಾಗಿ ಮಂತ್ರೌಷಧಿ ಯನ್ನು ವಿತರಿಸುವ ಮೂಲಕ ಲಕ್ಷ್ಮೇಶ್ವರದ ಕೀರ್ತಿಯನ್ನು ದೇಶದ ಉದ್ದಗಲಕ್ಕೂ ಹಬ್ಬುವಂತೆ ಮಾಡಿದ್ದ ದಿ. ಡಾ.ವೈದ್ಯಬಾಬುರಾವ್ ಕುಲಕರ್ಣಿ ಇವರ ಸೇವೆ ಅಪಾರವಾಗಿದ್ದು, ಅವರು ಹಾಕಿಕೊಟ್ಟ ಮಾರ್ಗದಲ್ಲಿ ಈ ಉಚಿತ ಔಷಧಿ ವಿತರಣೆ ಕಾರ್ಯಕ್ರಮವನ್ನ ಯಶಸ್ವಿಯಾಗಿ ನಡೆಸಿಕೊಂಡು ಹೋಗುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಪುರಸಭೆ ಮಾಜಿ ಅಧಕ್ಷ ವಿ.ಜಿ. ಪಡಗೇರಿ ಹೇಳಿದರು.



ಅವರು ರವಿವಾರ ಸಂಜೆ ದಿ. ವೈದ್ಯ ಬಾಬುರಾವ್ ಕುಲಕರ್ಣಿಯವರ ನಿವಾಸದಲ್ಲಿ 59ನೇ ವರ್ಷದ ಉಚಿತ ಅಸ್ತಮಾ ವಿತರಣಾ ಕಾರ್ಯಕ್ರಮದ ಅಂಗವಾಗಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಈ ಬಾರಿ ಜೂನ್ 8ರಂದು ಮಧ್ಯಾಹ್ನ 1 ಗಂಟೆ 23 ನಿಮಿಷಕ್ಕೆ ಮೃಗಶಿರಾ ಮಳೆಯ ಪ್ರವೇಶ ಕಾಲದಲ್ಲಿ ಡಾ. ಹರೀಶ ಕುಲಕರ್ಣಿ ಅವರ ನೇತೃತ್ವದಲ್ಲಿ ಲಕ್ಷ್ಮೇಶ್ವರದ ಸರಕಾರಿ ಪ್ರಾಥಮಿಕ ಶಾಲೆ ನಂ.1ರ ಆವರಣದಲ್ಲಿ 59ನೇ ವರ್ಷದ ಉಚಿತ ಅಸ್ಥಮಾ ಯಜ್ಞ ನಡೆಯಲಿದ್ದು, ಆಗಮಿಸುವ ರೋಗಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಂಡು ಹೋಗುವದು ಎಲ್ಲರ ಕರ್ತವ್ಯವಾಗಿದೆಯಲ್ಲದೆ, ಸೇವೆಯ ರೂಪದಲ್ಲಿ ಯಶಸ್ವಿಗೊಳಿಸಬೇಕಾಗಿದೆ ಎಂದು ಹೇಳಿದರು.

ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ಪಲ್ಲಣ್ಣನವರು ಕುಲಕರ್ಣಿ ವಹಿಸಿದ್ದರು. ಡಾ. ಹರೀಶ ಕುಲಕರ್ಣಿ, ಪುಟ್ಟಪ್ಪ ಕೋರಿ, ಗಂಗಪ್ಪ ದುರಗಣ್ಣವರ, ಕರಿಯಪ್ಪ ಉಳ್ಳಟ್ಟಿ, ನಾಗರಾಜ ಕೋರಿ, ನಿಂಗಪ್ಪ ಕಲ್ಯಾಣಿ, ಬಸವರಾಜ ಗುಡಗುಂಟಿ, ಕೃಷ್ಣ ಕ್ಷತ್ರಿ, ನೀಲಪ್ಪ ಬಲೇಶಿ, ಪಾಪಣ್ಣ ಬನ್ನಿ ಮುಂತಾದವರು ಹಾಜರಿದ್ದು ಕಾರ್ಯಕ್ರಮದ ಯಶಸ್ವಿಗೆ ಸಲಹೆ ಸೂಚನೆ ನೀಡಿದರು.

> ಎಂ.ಆರ್. ಪಾಟೀಲ, ಗೋಪಾಲ ಪಡ್ನೀಸ್, ನಿಂಗಪ್ಪ ಬನ್ನಿ ಮಾತನಾಡಿ, ಇಂತಹದೊಂದು ಮಹತ್ವದ ಕಾರ್ಯ ಜರುಗಬೇಕಾದರೆ ಅದಕ್ಕೆ ಸಮಾಜದ ಸಹಕಾರ ಅತಿ ಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಲಕ್ಷ್ಮೇಶ್ವರದ ಸಮಸ್ತ ಜನರು ಕಳೆದ 58 ವರ್ಷಗಳಿಂದ ಈ ಅಸ್ತಮಾ ಔಷಧಿ ವಿತರಣೆ ಕಾರ್ಯಕ್ಕೆ ಸಹಾಯ-ಸಹಕಾರ ನೀಡುತ್ತಿರುವದರಿಂದ ಇದೊಂದು ದೊಡ್ಡ ಕಾರ್ಯಕ್ರಮವಾಗಿ ನಡೆಯಲು ಸಾಧ್ಯವಾಗಿದ್ದು, ಇದೊಂದು ಧಾರ್ಮಿಕ ಕಾರ್ಯಕ್ರಮವಾಗಿ ಬೆಳೆಯುತ್ತಿದೆ. ಪುರಸಭೆಯಿಂದ ಅವಶ್ಯಕ ಸೇವೆಗಳನ್ನು ದೊರಕಿಸುವದು, ಬಂದ ಜನರಿಗೆ ಸರಿಯಾಗಿ ಕುಡಿಯುವ ನೀರು, ಔಷಧಿ, ಸ್ವಚ್ಛತೆ, ಸಾರಿಗೆ, ಪ್ರಸಾದ, ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸುವದಾಗಿ ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka